# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 251 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:29–04–2025 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 251 | RNI No: KARKAN/2023/88462 | KA/SK/CTA-874/2024-2026 | Chitradurga | Date: 29-04-2025 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು
ನಗರದಲ್ಲಿ ರೋಟರಿಯಿಂದ ಸುಸಜ್ಜಿತ ಡಯಾಲಿಸಿಸ್ ಕೇಂದ್ರ 2
ಹಾಸ್ಟೆಲ್, ಅಂಗನವಾಡಿಗಳಿಗೆ ಸ್ವ ಸಹಾಯ ಗುಂಪುಗಳಿಂದ ಆಹಾರ ಪೂರೈಕೆ: ಸಂಸದೆ 3
ಒಳಮೀಸಲಾತಿ ಜನಗಣತಿಯಲ್ಲಿ ಸಮುದಾಯಕ್ಕೆ ಅನ್ಯಾಯ: ಸಂಸದ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಕಾನೂನು ಜಾಗೃತಿ ಕಾರ್ಯಕ್ರಮ

» ದಾವಣಗೆರೆ

ಆರ್.ಎಲ್ ಕಾನೂನು ಕಾಲೇಜು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ರಾಷ್ಟ್ರೀಯ ಸೇವಾ ಯೋಜನೆ, ಇವರ ಸಹಯೋಗದೊಂದಿಗೆ ಏಪ್ರಿಲ್ 29 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಆರ್.ಎಲ್ ಕಾನೂನು ಕಾಲೇಜುನಲ್ಲಿ ಮಾದಕ ವಸ್ತುಗಳು ಹಾಗೂ ಅಮಲು ಪದಾರ್ಥಗಳ ನಿಯಂತ್ರಣ ಕಾಯ್ದೆ 1985 ವಿಷಯದ ಕುರಿತು ಕಾನೂನು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣನವರ ಉದ್ಘಾಟಿಸುವರು. ಆರ್.ಎಲ್ ಕಾನೂನು ಕಾಲೇಜಿನ ಪ್ರಾಂಶುಪಾಲರಾದ ಡಾ.ಜಿ.ಎಸ್. ಯತೀಶ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಮಾನವ ಹಕ್ಕುಗಳ ವೇದಿಕೆ ಕಾರ್ಯದರ್ಶಿ ಹಾಗೂ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಲ್.ಹೆಚ್ ಅರುಣಕುಮಾರ್ ಬಾಗವಹಿಸುವರು. ಕಾನೂನು ನೆರವು ಅಭಿರಕ್ಷಕರ ಸಹಾಯಕರಾದ ಮಹಾದೇವಿ ಸಿ. ಹಿರೇಮಠ ಸಂಪನ್ಮೂಲ ವ್ಯಕ್ತಿಗಳಾಗಿ ಪಾಲ್ಗೋಳುವರೆಂದು ಪ್ರಕಟಣೆ ತಿಳಿಸಿದೆ.

### ಶ್ರೀ ಸಿದ್ದಪ್ಪನ ಬೆಟ್ಟದಲ್ಲಿ ಇಂದು ಪರೇವು



» ಹೊಸದುರ್ಗ

ಕಳೆದ ಒಂದು ವಾರದಿಂದ ಪಟ್ಟಣದಲ್ಲಿ ಗ್ರಾಮ ದೇವತೆ ಶ್ರೀ ದುರ್ಗಾಂಬಿಕ ದೇವಿಯವರ ಜಾತ್ರಾ ಮಹೋತ್ಸವವು ನಡೆಯುತ್ತಿದ್ದು ಉತ್ಸವದ ಅಂಗವಾಗಿ ಏ 29 ರಂದು ಮಂಗಳವಾರ ಮಧ್ಯಾಹ್ನ 1 ಗಂಟೆಗೆ ಪಟ್ಟಣದ ಸಮೀಪವಿರುವ ಶ್ರೀ ಸಿದ್ದಪ್ಪನ ಬೆಟ್ಟದಲ್ಲಿ ಪರೇವು ಕಾರ್ಯಕ್ರಮವನ್ನ ನಡೆಯಲಿದೆ ಎಂದು ಶ್ರೀ ದುರ್ಗಾಂಬಿಕ ದೇವಸ್ಥಾನ ಸಮಿತಿಯ ಧರ್ಮದರ್ಶಿ ಅಗ್ರೋ ಹೆಚ್.ಶಿವಣ್ಣ ತಿಳಿಸಿದ್ದಾರೆ. ಈ ಕಾರ್ಯಕ್ರಮದಲ್ಲಿ ಬೆಳಿಗ್ಗೆ ಶ್ರೀಸಿದ್ದೇಶ್ವರ ಸ್ವಾಮಿಯವರಿಗೆ ವಿಶೇಷ ಪೂಜೆ ಮಹಾಮಂಗಳಾರತಿ ಮತ್ತು ಮಧ್ಯಾಹ್ನ ಅನ್ನಸಂತರ್ಪಣೆ ನಡೆಯಲಿದ್ದು ಹೊಸದುರ್ಗ ಪಟ್ಟಣದಸುತ್ತಾಮುತ್ತಲಿನಭಕ್ತರುಯಾಲಕ್ಕಪ್ಪನಹಟ್ಟಿ, ಶಿವನೇಕಟ್ಟೆ, ಮಧುರೆ, ಬಾಗೂರು, ಕುಂದೂರು ಸೇರಿದಂತೆ ಈಗೆ ಸುತ್ತಮುತ್ತಲಿನ ಭಕ್ತರು ಪರೇವು ಮತ್ತು ಪೂಜಾ ಕಾರ್ಯದಲ್ಲಿ ಭಾಗವಹಿಸಲಿದ್ದಾರೆ ಎಂದರು. ಹೊಸದುರ್ಗ ಗ್ರಾಮ ದೇವತೆಯಾದ ಶ್ರೀ ದುರ್ಗಾಂಬಿಕಾ ದೇವಿಯವರ ಜಾತ್ರಾ ಮಹೋತ್ಸವವು ಒಂದು ವಾರಗಳ ಕಾಲ ನಡೆಯುತ್ತಿದ್ದು ಪ್ರತಿ ವರ್ಷ ಜಾತ್ರೆಯ ಕೊನೆಯ ದಿನ ಪಟ್ಟಣಸ ಸಮೀಪದ ಬೆಟ್ಟದಲ್ಲಿರುವ ಶ್ರೀ ಸಿದ್ದೇಶ್ವರ ಸ್ವಾಮಿಗೆ ಪ್ರತಿವರ್ಷದಂತೆ ಈ ವರ್ಷವೂ ಸಹಾ ಪರೇವು ಕಾರ್ಯಕ್ರಮವನ್ನ ಆಯೋಜಿಸಲಾಗಿದ್ದು ಇದರ ಉದ್ದೇಶ ಮತ್ತು ವಿಶೇಷತೆ ಎಂದರೆ ನಾಡಿನ ಜನರಿಗೆ ಒಳಿತಾಗಲಿ,ಮಳೆ ಬೆಳೆ ಸಂವೃದ್ದವಾಗಲಿ,ಸಮಸ್ತ ಭಕ್ತರು ಸುಖ,ಶಾಂತಿ ನೆಮ್ಮದಿಯಿಂದ ಬದುಕಲಿ ನಾಡಿಗೆ ಒಳಿತಾಗಲಿ ಎಂಬ ಉದ್ದೇಶದಿಂದ ಇಂತಹ ಒಂದು ವಿಶಿಷ್ಟ ಕಾರ್ಯಕ್ರಮವನ್ನ ಶ್ರೀ ದುರ್ಗಾಂಬಿಕಾ ದೇವಯವರ ಅಪ್ಪಣೆಯಂತೆ ನಡೆಸಿಕೋಂಡು ಹೋಗಲಾಗುತ್ತಿದೆ.

### ಹುದ್ದೆಗೆ ಅರ್ಜಿ

» ದಾವಣಗೆರೆ

ದಾವಣಗೆರೆ ಜಿಲ್ಲೆಯಾದ್ಯಂತ ವಿವಿಧ ಘಟಕಗಳಲ್ಲಿ ಖಾಲಿ ಇರುವ 110 ಸ್ವಯಂ ಸೇವಕ ಪುರುಷ ಗೃಹ ರಕ್ಷಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆಯನ್ನು ಜಿಲ್ಲಾ ಸಮಾದೇಶ್ವರ ಕಚೇರಿ ಘಟಕ ಕಚೇರಿಯಲ್ಲಿ ಹಾಗೂ ತಾಲ್ಲೂಕು/ಉಪ ಘಟಕಗಳಲ್ಲಿಯೂ ಪಡೆದು ಭರ್ತಿ ಮಾಡಿ, ಮೇ.16 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಸಮಾದೇಶ್ವರ ಕಚೇರಿ, ದೇವರಾಜ ಬಡಾವಣೆ ಬಿ ಬ್ಲಾಕ್, ಶಿವಪಾರ್ವತಿ ಕಲ್ಯಾಣ ಮಂಟಪ ಪಕ್ಕ, ಶಿವಾಲಯ ಹಿಂಭಾಗ, ದಾವಣಗೆರೆ–577006 ಸಂಪರ್ಕಿಸಲು ಹೋಂ ಗಾರ್ಡ್ಸ್ ಕಮಾಂಡೆಂಟ್ ತಿಳಿಸಿದ್ದಾರೆ.

## ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅಭಿಪ್ರಾಯ

# ಅಸಮತೋಲನ ನಿವಾರಣೆಗಾಗಿ ಜಿಲ್ಲೆಗೆ 10 ವರ್ಷ ಅವಧಿಗೆ ವಿಶೇಷ ಯೋಜನೆ ಅಗತ್ಯ

» ಚಿತ್ರದುರ್ಗ

ಪ್ರಾದೇಶಿಕಅಸಮತೋಲನನಿವಾರಣೆಗಾಗಿ ಗುಲ್ಬರ್ಗ ವಿಭಾಗದ ಕಲ್ಯಾಣ ಕರ್ನಾಟಕ ಜಿಲ್ಲೆಗಳಿಗೆನೀಡಿರುವವಿಶೇಷಯೋಜನೆಗಳ ಮಾದರಿಯಲ್ಲಿ, ಚಿತ್ರದುರ್ಗ ಜಿಲ್ಲೆಗೆ 10 ವರ್ಷಗಳ ಅವಧಿಯ ವಿಶೇಷ ಯೋಜನೆ ಪ್ಯಾಕೇಜ್ ನೀಡಿದರೆ, ಜಿಲ್ಲೆಯ ಎಲ್ಲಾ ತಾಲ್ಲೂಕುಗಳು ಅಭಿವೃದ್ಧಿ ಹೊಂದಲಿವೆ ಎಂದು ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ, ಸೋಮವಾರ ಏರ್ಪಡಿಸಿದ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಬೆಂಗಳೂರು ವಿಭಾಗದ ಮಟ್ಟದ ಸಂವಾದ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಚಿತ್ರದುರ್ಗ ಅತ್ಯಂತ ಹಿಂದುಳಿದ ಜಿಲ್ಲೆಯಾಗಿದೆ. ಜಿಲ್ಲೆಯ ಜನಸಂಖ್ಯೆ ಪೈಕಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳು ಹಾಗೂ ಅಲ್ಪಸಂಖ್ಯಾತರು ಶೇ.90 ರಷ್ಟು ಇದ್ದಾರೆ. ಪ್ರತಿ ತಾಲ್ಲೂಕಿನಿಂದಲೂ ಸಾವಿರಾರು ಜನ ಹೆಣ್ಣು ಮಕ್ಕಳು ಗಾರ್ಮೆಂಟ್ಸ್ ಕೆಲಸ ಅರಸಿಕೊಂಡು ಬೆಂಗಳೂರಿಗೆ ವಲಸೆ ಹೋಗಿದ್ದಾರೆ. ಹಿರಿಯೂರಿನಲ್ಲಿರುವ ಗಾರ್ಮೆಂಟ್ ಫ್ಯಾಕ್ಟರಿಯಲ್ಲಿ ತಾಲ್ಲೂಕಿನ ಏಳೆಂಟು ಸಾವಿರ ಮಹಿಳೆಯರು ಕೆಲಸ ಮಾಡುತ್ತಿದ್ದಾರೆ. ಇದರಿಂದ ಮಹಿಳೆಯರು ಆರ್ಥಿಕವಾಗಿ ಸ್ವಾಲಂಭಿಯಾಗಲು ಸಹಕಾರಿಯಾಗಿದೆ. ಇಂತಹ ಸಂದರ್ಭದಲ್ಲಿ ಸರ್ಕಾರ ಗೃಹಲಕ್ಷ್ಮೀ ಯೋಜನೆಯು ರಾಜ್ಯದ ಮಹಿಳೆಯರ ಆರ್ಥಿಕ ಚೈತನ್ಯ ತುಂಬುವಲ್ಲಿ ಪ್ರಮುಖ ಪಾತ್ರ ವಹಿಸಿದೆ ಎಂದರು.

ಮಧ್ಯ ಕರ್ನಾಟಕ ಭಾಗಕ್ಕೆ ವಾಣಿ ವಿಲಾಸ ಸಾಗರ ಜಲಾಶಯ ಜೀವನಾಡಿಯಾಗಿದೆ. ಪ್ರವಾಸೋದ್ಯಮ ಅಭಿವೃದ್ಧಿ ನಿಟ್ಟಿನಲ್ಲಿ ಕೃಷ್ಣರಾಜ ಸಾಗರ ಮಾದರಿಯಲ್ಲಿ ವಿವಿ ಸಾಗರ ಬಳಿ ಉದ್ಯಾನವನ ನಿರ್ಮಿಸಲು ಚಿಂತನೆ ನಡೆಸಲಾಗಿದೆ. ಹೆಚ್ಚಿನ ಪ್ರವಾಸಿಗರನ್ನು ಸೆಳೆಯುವ ನಿಟ್ಟಿನಲ್ಲಿ ಯೋಜನೆ ರೂಪಿಸಲಾಗುವುದು. ಜಿಲ್ಲೆಯ 3 ತಾಲ್ಲೂಕಗಳಿಗೆ ಕೆ.ಎಂ.ಇ.ಆರ್.ಸಿ ಹಾಗೂ ಡಿಎಂಎಫ್ ಅಡಿ ವರ್ಷಕ್ಕೆ ರೂ.500 ಕೋಟಿಗಳಷ್ಟು ಅಭಿವೃದ್ಧಿ ಅನುದಾನ ದೊರಕುತ್ತದೆ.ಆದರೆ ಚಳ್ಳಕೆರೆ,ಹಿರಿಯೂರು, ಮೊಳಕಾಲ್ಮೂರು ತಾಲ್ಲೂಕುಗಳಿಗೆ ಈ ಅನುದಾನ ದೊರೆಯುವುದಿಲ್ಲ. ಈ ಎಲ್ಲ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು ಅಸಮತೋಲನ ನಿವಾರಣಾ ಸಮತಿ ಜಿಲ್ಲೆಗೆ ವಿಶೇಷ ಅನುದಾನ ಪ್ಯಾಕೇಜ್ ನೀಡುವಂತೆ ಶಿಫಾರಸ್ಸು ಮಾಡಬೇಕು ಎಂದು ಸಚಿವ ಡಿ.ಸುಧಾಕರ್ ಹೇಳಿದರು.

**ಸೆಪ್ಟೆಂಬರ್ ತಿಂಗಳಿಗೆ ಸರ್ಕಾರಕ್ಕೆ ವರದಿ, ಪ್ರೋ.ಗೋವಿಂದ ರಾವ್:** ಆರ್ಥಿಕ ತಜ್ಞರೂ ಆಗಿರುವ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಅಧ್ಯಕ್ಷ ಪ್ರೊ. ಎಂ. ಗೋವಿಂದರಾವ್ ಅವರು ಮಾತನಾಡಿ, 23 ವರ್ಷಗಳ ಹಿಂದೆ ಪ್ರಾದೇಶಿಕ ಅಸಮತೋಲನ ನಿವಾರಣೆಗಾಗಿ ರಾಜ್ಯದ 175 ತಾಲ್ಲೂಕುಗಳನ್ನು ಅಧ್ಯಯನ ಮಾಡಿ ಡಾ. ಡಿ.ಎಂ. ನಂಜುಂಡಪ್ಪ ಅವರು 39 ಅತ್ಯಂತ ಹಿಂದುಳಿದ ತಾಲ್ಲೂಕುಗಳು, 0 ಅತಿ ಹಿಂದುಳಿದ ತಾಲ್ಲೂಕುಗಳು ಹಾಗೂ 35 ಹಿಂದುಳಿದ ತಾಲ್ಲೂಕುಗಳು ಎಂದು ಹಿಂದುಳಿದಿರುವಿಕೆಯನ್ನು ಗುರುತಿಸಿದ್ದರು. ಇದರಲ್ಲಿ ಉತ್ತರ ಕರ್ನಾಟಕ ಭಾಗದ 26 ಅತ್ಯಂತ ಹಿಂದುಳಿದ ತಾಲ್ಲೂಕುಗಳಾಗಿದ್ದರೆ, ದಕ್ಷಿಣ ಕರ್ನಾಟಕದ 13 ತಾಲ್ಲೂಕುಗಳು ಇದ್ದವು. ಇದರ ನಿವಾರಣೆಗಾಗಿ ಮಾಡಿದ ಶಿಫಾರಸ್ಸಿನ ಅನ್ವಯ, ಸರ್ಕಾರ 2007–08 ರಿಂದ 2023–24 ರವರೆಗೆ 45,789 ಕೋಟಿ ರೂ. ಗಳ ಹಂಚಿಕೆಯಾಗಿ, 37,661 ಕೋಟಿ ರೂ. ಬಿಡುಗಡೆಯಾಗಿದ್ದು, ಈ ಪೈಕಿ 34,381 ಕೋಟಿ ರೂ. ಖರ್ಚಾಗಿದೆ. ಪ್ರಸ್ತುತ ತಾಲ್ಲೂಕುಗಳ ಸಂಖ್ಯೆ 240 ಆಗಿದೆ. ಇಷ್ಟೊಂದು ಹಣ ಖರ್ಚು ಮಾಡಿದ ಬಳಿಕ, ತಾಲ್ಲೂಕುಗಳ ಹಿಂದುಳಿದಿರುವಿಕೆ ಕಡಿಮೆ ಆಗಿದೆಯೇ, ಯಾವೆಲ್ಲಾ ಕ್ಷೇತ್ರದಲ್ಲಿ ಏನೇನು ಅಭಿವೃದ್ಧಿಯಾಗಿದೆ. ಹಣ ನೀಡಿದರೂ ಅಭಿವೃದ್ಧಿ ಆಗಲಿಲ್ಲವೆಂದರೆ ಅದಕ್ಕೆ ಕಾರಣಗಳೇನು, ಎಂಬುದನ್ನು ಕೂಲಂಕಷವಾಗಿ ಪರಿಶೀಲಿಸಿ, ರಾಜ್ಯದಲ್ಲಿನ ಅಸಮತೋಲನ ಸರಿಪಡಿಸಿ, ಸಮಗ್ರ ಕರ್ನಾಟಕ ಅಭಿವೃದ್ಧಿಗೊಳ್ಳಲು ಏನೆಲ್ಲ ಕ್ರಮ ವಹಿಸಬೇಕು ಎನ್ನುವ ಉದ್ದೇಶದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯನ್ನು ರಚಿಸಿದ್ದಾರೆ. ಸಮಿತಿಯನ್ನು ಮಾರ್ಚ್–2024ರಲ್ಲಿ ರಚಿಸಲಾಗಿದ್ದರೂ, ಸೆಪ್ಟೆಂಬರ್–2024 ರ ವೇಳೆಗೆ ಪೂರ್ಣ ಪ್ರಮಾಣದಲ್ಲಿ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಕಾರ್ಯನಿರ್ವಹಿಸಲು ಪ್ರಾರಂಭಿಸಿತು. ರಾಜ್ಯದಲ್ಲಿ ದಕ್ಷಿಣ ಕನ್ನಡ ಜಿಲ್ಲೆ, ಉಡುಪಿ ಮತ್ತು ಬೆಂಗಳೂರು ನಗರ ಜಿಲ್ಲೆಗಳು ಮಾತ್ರ ನಿರೀಕ್ಷಿತ ಮಟ್ಟದಲ್ಲಿ ಅಭಿವೃದ್ಧಿಯ ವೇಗ ಹೊಂದಿದ್ದು, ಉಳಿದ ಜಿಲ್ಲೆಗಳಲ್ಲಿ ಅಭಿವೃದ್ಧಿ ವೇಗ ಪಡೆದಿಲ್ಲ. ಮೂಲಭೂತ ಸೌಕರ್ಯ, ವಿದ್ಯುತ್, ರಸ್ತೆ, ಹಣಕಾಸು, ಶಿಕ್ಷಕರು ಮತ್ತು ವಿದ್ಯಾರ್ಥಿ ಅನುಪಾತ, ಸಾಕ್ಷರತೆ, ವೈದ್ಯಕೀಯ ವ್ಯವಸ್ಥೆ, ಕೈಗಾರಿಕೆ, ನೀರಾವರಿ, ಕೃಷಿ, ಸೇವಾ ವಲಯ ಮುಂತಾದ 32 ಸೂಚ್ಯಂಕಗಳನ್ನು ಆಧರಿಸಿ ಸಮಿತಿಯು ವರದಿ ಸಂಗ್ರಹಿಸಲಿದೆ. ಸಮಿತಿಯು ಪ್ರತಿ ಜಿಲ್ಲೆಗೆ ಭೇಟಿ ನೀಡಿ, ಅಲ್ಲಿನ ಜನರ ಅನುಭವ, ಅಭಿಪ್ರಾಯಗಳನ್ನು ಪಡೆದು, ಸಂಗ್ರಹಿಸಿದ ಮಾಹಿತಿ, ಅಧ್ಯಯನದ ವರದಿಗಳ ಆಧಾರದಲ್ಲಿ ಅಸಮತೋಲನ ನಿವಾರಣೆ ಹಾಗೂ ಸಮಗ್ರ ಕರ್ನಾಟಕದ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ಶಿಫಾರಸ್ಸುಗಳ ವರದಿಯನ್ನು ಮುಂಬರುವ ಸೆಪ್ಟೆಂಬರ್ ವೇಳೆಗೆ ರಾಜ್ಯ ಸರ್ಕಾರಕ್ಕೆ ಸಲ್ಲಿಸಲಿದೆ ಎಂದರು.

**ಪ್ರಾದೇಶಿಕ ಅಸಮತೋಲನ ಹೋಬಳಿ ಘಟಕವಾಗಿ ಪರಿಗಣಿಸಿ, ಶಾಸಕ ಟಿ.ರಘುಮೂರ್ತಿ ಸಲಹೆ:** ‌ಪ್ರಾದೇಶಿಕ ಅಸಮತೋಲನ ಸೂಚ್ಯಂಕದಲ್ಲಿ ತಾಲ್ಲೂಕು ಅನ್ನು ಘಟಕವಾಗಿ ಪರಿಗಣಿಸಿ, ಅಭಿವೃದ್ಧಿ, ಹಿಂದುಳಿದಿರುವಿಕೆ ಎಂದು ವರ್ಗೀಕರಣ ಮಾಡಲಾಗುತ್ತಿದೆ. ಆದರೆ ಮುಂದುವರೆದ ತಾಲ್ಲೂಕಿನಲ್ಲಿಯೂ ಸಹ ಕೆಲವು ಹೋಬಳಿಗಳು ಪ್ರಾದೇಶಿಕ ಅಸಮಾತೋಲನಕ್ಕೆ ತುತ್ತಾಗಿವೆ. ಈ ಹಿನ್ನಲೆಯಲ್ಲಿ ಹೋಬಳಿಯನ್ನು ಘಟಕವಾಗಿ ಪರಿಗಣಿಸಿ, ವರದಿ ಶಿಫಾರಸ್ಸು ಮಾಡುವಂತೆ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಸಲಹೆ ನೀಡಿದರು.


ಪುಟ 2




### ಮೌಲ್ಯಮಾಪನಕ್ಕೆ ಸಂಸದ ಗೋವಿಂದ ಎಂ ಕಾರಜೋಳ ಒತ್ತಾಯ

ಡಾ. ಡಿ.ಎಂ.ನಂಜುಡಪ್ಪ ವರದಿ ಶಿಫಾರಸ್ಸಿನ ಹಿನ್ನಲೆಯಲ್ಲಿ 2007–08 ರಿಂದ 2023–24ನೇ ಸಾಲಿನ ವರೆಗೆ ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗೆ ರೂ.45,789.50 ಕೋಟಿ ಅನುದಾನ ಹಂಚಿಕೆ ಮಾಡಲಾಗಿದ್ದು ರೂ.37,661.65 ಕೋಟಿ ಹಣ ಬಿಡುಗಡೆ ಮಾಡಲಾಗಿದೆ. ಇದರಲ್ಲಿ ರೂ.34,381.02 ಕೋಟಿ ವೆಚ್ಚವಾಗಿದೆ. ಆದರೂ ಹಿಂದುಳಿದ ತಾಲ್ಲೂಕುಗಳಲ್ಲಿ ಮೂಲಭೂತ ಸೌಕರ್ಯಗಳು ವೃದ್ಧಿಯಾಗಿಲ್ಲ. ಸರ್ಕಾರದ ಆಸ್ತಿಗಳು ಸೃಜನೆಯಾಗಿಲ್ಲ. ಪ್ರಸ್ತುತ ಸಮಿತಿಯು, ಅನುದಾನ ಸದ್ಬಳಕೆಯಾಗಿದೆಯೋ ಅಥವಾ ಇಲ್ಲವೋ ಎನ್ನುವ ಕುರಿತು ಮೌಲ್ಯಮಾಪನ ಮಾಡಿ, ವರದಿಯನ್ನು ನೀಡಬೇಕಾಗಿ ಸಂಸದ ಗೋವಿಂದ ಎಂ ಕಾರಜೋಳ ಒತ್ತಾಯಿಸಿದರು. ದೇಶದಲ್ಲಿ ಸದಾ ಬರಗಾಲಕ್ಕೆ ತುತ್ತಾಗುವ 16 ಜಿಲ್ಲೆಗಳ ಪೈಕಿ ಚಿತ್ರದುರ್ಗ ಜಿಲ್ಲೆ ಮೊದಲನೇ ಸ್ಥಾನದಲ್ಲಿದೆ. ಜಿಲ್ಲೆಯ ಬಹುತೇಕ ರೈತರು ಮಳೆ ಆಶ್ರಿತ ಒಣ ಬೇಸಾಯ ನಂಬಿಕೊಂಡಿದ್ದಾರೆ. ಬ್ಯಾಂಕುಗಳು ಸಹ ನಿರೀಕ್ಷಿತ ಮಟ್ಟದಲ್ಲಿ ಅಭಿವೃದ್ಧಿ ಸಾಲ ಸೌಲಭ್ಯ ನೀಡುವಲ್ಲಿ ಕ್ರಮ ವಹಿಸಿಲ್ಲ. ಜಿಲ್ಲೆಯಲ್ಲಿ ಉತ್ತಮ ಖನಿಜ ಸಂಪತ್ತು ಇದೆ. ಈ ಖನಿಜ ಸಂಪತ್ತು ಜಿಲ್ಲೆಯಲ್ಲಿಯೇ ಸಂಸ್ಕರಿಸಿ ರಫ್ತು ಮಾಡಿದರೆ, ಜಿಲ್ಲೆಗೆ ಅಭಿವೃದ್ದಿಗೆ ಪೂರಕವಾಗಲಿದೆ. ಜನರಿಗೂ ಉದ್ಯೋಗವಕಾಶಗಳು ಲಭಿಸುತ್ತವೆ. ಈ ನಿಟ್ಟಿನಲ್ಲಿ ಸಮಿತಿ ವರದಿ ನೀಡುವಂತೆ ಸಂಸದ ಗೋವಿಂದ ಎಂ ಕಾರಜೋಳ ಹೇಳಿದರು.

## ಪ್ರಮುಖ ಸುದ್ದಿ

## ಮಳೆ ನೀರಿಗೆ ನಲುಗಿ ಹೋದ ತಗ್ಗು ಪ್ರದೇಶದ ಅಂಗಡಿಗಳ ಮಾಲಿಕರು: ನೀರಿನಲ್ಲಿ ಮುಳುಗಿ ಹೋದ ಲಕ್ಷಾಂತರ ವಸ್ತುಗಳು

# ಅವೈಜ್ಞಾನಿಕ ಚರಂಡಿ ನಿರ್ಮಾಣ: ನೀರು ಹೋಗಲು ದಾರಿಯೇ ಇಲ್ಲ



» ಹೊಸದುರ್ಗ

ರಾಜ್ಯ ರಸ್ತೆ ನಿಗಮದವರು ಪಟ್ಟಣದ ಪ್ರಮುಖ ರಸ್ತೆಯವನ್ನ ವಿಸ್ತರಣೆ ಮಾಡುವ ಮೂಲಕ ಟಾರ್ ಹಾಕಿ ರಸ್ತೆ ನಿರ್ಮಾಣ ಮಾಡಿದ್ದಾರೆ, ಜೊತೆ ಜೋತೆಗೆ ರಸ್ತೆಯ ಬಲ ಬದಿ ಮತ್ತು ಎಡ ಬದಿ ಎರಡೂ ಕಡೆ ನೀರು ಹೋಗುವ ಸಲುವಾಗಿ ಪುಟ್‌ಪಾತ್‌ಗೆ ಹೋಂದಿಕೊಂಡಂತೆ ದೋಡ್ಡ ದೋಡ್ಡ ಬಾಕ್ಸ್ ಚರಂಡಿಗಳನ್ನೂ ಸಹಾ ನಿರ್ಮಿಸಿದ್ದಾರೆ ಈ ಬಾಕ್ಸ್ ಚರಂಡಿಗಳ ಎಡ ಮತ್ತು ಬಲ ಬದಿಗಳಲ್ಲಿ ಸಾಕಷ್ಟು ಅಂಗಡಿ,ಹೋಟಲ್,ವಸತಿಗೃಹಗಳು,ಮಳಿಗೆಗಳು ಮತ್ತು ಲಡ್ಜ್‌ಗಳು ಸಹಾ ಇವೆ ವಿಪರೀತ ಮಳೆ ಬಂದರೆ ಅಥವಾ ಬೇರೆ ಬೇರೆ ವಿಧಾನಗಳಿಂದ ವಿಪರೀತ ನೀರು ಬಂದರೆ ನೀರು ಹೋಗುವ ಸಲುವಾಗಿ ಬಾಕ್ಸ್ ಚರಂಡಿ ಮಾಡಿದವರು ಕನಿಷ್ಟ ಪಕ್ಷ ಅಲ್ಲಲ್ಲಿ ನೀರು ಹೋಗಲು ಸ್ಥಳಾವಕಾಶ ಮಾಡಿಲ್ಲ,ಸಣ್ಣ ಸಣ್ಣ ವೋಲ್‌ಗಳನ್ನ ಮಾತ್ರ ಮಾಡಿದ್ದಾರೆ ಬಂದ ರಸ್ತೆಯಲ್ಲಿ ನಿಂತ ನೀರು ಚರಂಡಿಗಳಿಗೆ ಹೋಗದೆ ತಗ್ಗು ಪ್ರದೇಶದ ಅಂಗಡಿ,ಹೋಟಲ್‌ಗಳಿಗೆ ಸುಮಾರು 100 ದೂರದ ರಸ್ತೆಯಿಂದ ಹರಿದು ಬಂದ ರಭಸದ ನೀಡು ಧಿಡೀರಂತೆ ನುಗ್ಗುತ್ತಿವೆ ಈಗೆಯೇ ಇಲ್ಲಿನ ಹೊಳಲ್ಕೆರೆ ರಸ್ತೆಯಲ್ಲಿರುವ ಭಗೀರಥ ಲಾಡ್ಜ್‌ನ ಕೆಳಭಾಗದಲ್ಲಿ ಹೋಟಲ್ ನಡೆಸಲಾಗುತ್ತಿದೆ ನಿತ್ಯವೂ ಈ ಹೋಟಲ್‌ಗೆ ನೂರಾರು ಮಂದಿ ಬರುತ್ತಾರೆ ಹೋಗುತ್ತಾರೆ ಆದರೆ ಭಾನುವಾರ ರಾತ್ರಿ ವಿಪರೀತ ಮಳೆ ಬಂದು ಹೋಟಲ್ ಒಳಗೆ ಎಕಾ ಎಕೀ ರಸ್ತೆಯಿಂದ ಧಿಡೀರನೆ ನೀರು ನುಂಗಿದೆ ಇದರಿಂದ ಎರಡು ಫ್ರಿಜ್ಜ್, ಆಹಾರ ಪದಾರ್ಥಗಳು ಹೊಟಲ್ ಸಾಮಾನುಗಳು, ನೀರಿನ ಬಾಟಲ್‌ಗಳು ಮತ್ತಿತರೆ ಬೆಲೆ ಬಾಳುವ ವಸ್ತುಗಳು ನೀರು ಪಾಲಾಗಿವೆ ಹೋಟಲ್ ಸಂಪೂರ್ಣವಾಗಿ ಕೆಸರುಮಯವಾಗಿದೆ. ಇದರಿಂದ ಹೊಟಲ್ ಮಾಲಿಕರು ಲಕ್ಷಾಂತರ ರೂ ನಷ್ಟ ಅನುಭವಿಸಿದ್ದಾರೆ. ರಸ್ತೆ ನಿರ್ಮಾಣ ಪ್ರಾಧಿಕಾರದವರು ಕೂಡಲೇ ಇಂತಹ ಸ್ಥಳಗಳನ್ನು ಪರಿಶೀಲಿಸಿ ವೈಜ್ಞಾನಿಕವಾಗಿ ರಸ್ತೆ ಮತ್ತು ಚರಂಡಿ ಕಾಮಗಾರಿಯನ್ನ ಮಾಡಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.




> ರಸ್ತೆ ಮತ್ತು ಬಾಕ್ಸ್ ಚರಂಡಿಗಳ ನಿರ್ಮಾಣ ಮಾಡವಾಗ ವೈಜ್ಞಾನಿಕವಾಗಿ ಮತ್ತು ಪ್ಲಾನಿಂಗ್ ಮಾಡಿ ನಿರ್ಮಾಣ ಮಾಡಿದರೆ ತಗ್ಗು ಪ್ರದೇಶದ ಅಂಗಡಿಗಳಿಗಾಗಲಿ,ಮಳಿಗೆಗಳಿಗಾಗಲಿ ಯಾವುದಕ್ಕೆ ಆಗಲಿ ಧಕ್ಕೆ ಬರುವುದಿಲ್ಲ ಈ ತರಹ ರಸ್ತೆಯ ನೀರು ಬಂದು ಜಮಾಯಿಸುವುದಿಲ್ಲ ನೀರು ಚರಂಡಿ ತಲುಪಲು ಸರಿಯಾದ ವೈಜ್ಞಾನಿಕ ವೋಲ್ಗಳು ಮತ್ತು ನೀರು ಹೋಗಲು ಸ್ಥಳವಿಲ್ಲ ಈಗಾಗಿ ಇಂತಹ ಅನೇಕ ಅವಘಡಗಳು ಹಾಗುತ್ತವೆ ಇಂತಹ ಅವ್ಯವಸ್ಥೆಯನ್ನ ಕೂಡಲೇ ಸರಿಪಡಿಸಬೇಕು ಇಲ್ಲದಿದ್ದರೆ ವ್ಯಾಪಾರಸ್ಥರ ಬದುಕು ದುಸ್ಥರವಾಗುತ್ತದೆ.
>
> » **ಎಂ.ಪಿ.ಶಂಕರ್, ಕೆಪಿಸಿಸಿ ಸದಸ್ಯ**

## ಫಾಸ್ಟ್ ನ್ಯೂಸ್

### ನಿಧಿ ಆಪ್ಕೆ ನಿಕಾಟ್ 2.0 ಕಾರ್ಯಕ್ರಮ

» **ದಾವಣಗೆರೆ**

ಜಿಲ್ಲೆಯಲ್ಲಿ ಪ್ರತಿ ತಿಂಗಳು ನಿಧಿ ಆಪ್ಕೆ ನಿಕಾಟ್ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತದೆ. ಕಾರ್ಮಿಕರ ಇಪಿಎ□□ಃ ಮತ್ತು ಕಾರ್ಮಿಕರಿಗೆ ಲಭ್ಯವಿರುವ ವಿವಿಧ ಪ್ರಯೋಜನಗಳ ಬಗ್ಗೆ ಅರಿವು ಮೂಡಿಸಲಾಗುತ್ತದೆ. ಏಪ್ರಿಲ್ 28 ರಂದು ನಿಧಿ ಆಪ್ಕೆ ನಿಕಟ್ 2.0, ಶ್ರೀಸಿದ್ಧಾರ್ಥ ವಿದ್ಯಾ ಸಂಸ್ಥೆ, 4998, 17ನೇ ಕ್ರಾಸ್, ಆಂಜನೇಯ ಬಡಾವಣೆ ದಾವಣಗೆರೆ ಇಲ್ಲಿ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಉದ್ಯೋಗದಾತರು ಮತ್ತು ಉದ್ಯೋಗಿಗಳಿಗೆ, ಪಿಂಚಣಿದಾರರಿಗೆ ಮಧ್ಯಾಹ್ನ 2.30 ರಿಂದ 4 ಗಂಟೆಯವರೆಗೆ ಕಾರ್ಯಕ್ರಮವನ್ನು ನಡೆಸಲಾಗುವುದು ಎಂದು ಪ್ರಾದೇಶಿಕ ಭವಿಷ್ಯ ನಿಧಿ ಕಮೀಷನರ್ ತಿಳಿಸಿದ್ದಾರೆ.

### ತೆರಿಗೆ ಪಾವತಿಗೆ ಶೇ.5 ರಷ್ಟು ರಿಯಾಯಿತಿ

» **ದಾವಣಗೆರೆ**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಸೂಚಿಸಿರುವಂತೆ ಆರ್ಥಿಕ ವರ್ಷದ ಪ್ರಾರಂಭದ ಮೂರು ತಿಂಗಳೊಳಗಾಗಿ ಪ್ರಸಕ್ತ ಸಾಲಿನ ಸಂಪೂರ್ಣ ತೆರಿಗೆಯನ್ನು ಪಾವತಿಸುವವರಿಗೆ ಶೇ.5 ರಷ್ಟು ವಿನಾಯಿತಿ ನೀಡಲಾಗುವುದು. ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಎಲ್ಲಾ ವಿಧದ ಆಸ್ತಿಗಳ ತೆರಿಗೆ ಪಾವತಿಸುವ ಸಾರ್ವಜನಿಕರು ಜೂನ್.30 ರೊಳಗಾಗಿ ತೆರಿಯನ್ನು ಆಯಾ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ತೆರಿಗೆ ಪಾವತಿಸಬೇಕೆಂದು ಜಿ.ಪಂ ಮುಖದಯ ಕಾರ್ಯನಿರ್ವಾಹಕ ಅಧಿಕ

### ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಅರ್ಜಿ ಆಹ್ವಾನ

» **ದಾವಣಗೆರೆ**

ಜಗಳೂರು ತಾಲ್ಲೂಕಿನ ತೋಟಗಾರಿಕೆ ಇಲಾಖೆ ವತಿಯಿಂದ ಪ್ರಸಕ್ತ ಸಾಲಿಗೆ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಹೊಸದಾಗಿ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ಕಾರ್ಯಕ್ರಮದಡಿ ಸಣ್ಣ, ಅತಿಸಣ್ಣ, ಪರಿಶಿಷ್ಟಜಾತಿ, ಹಾಗೂ ಪರಿಶಿಷ್ಟ ಪಂಗಡದ ಅರ್ಹ ರೈತರು ಅರ್ಜಿ ಸಲ್ಲಿಸಬಹುದು. ಯೋಜನೆಯಡಿ ತೋಟಗಾರಿಕೆ ಬೆಳೆಗಳಾದ ದಾಳಿಂಬೆ, ನಿಂಬೆ ಗೋಂಡಂಬಿ, ಮಲ್ಲಿಗೆ, ವೀಳ್ಯದೆಲೆ, ತೆಂಗು, ಮಾವು, ಸಪೋಟ, ಸೀಬೆ, ಅಂಗಾಂಶಬಾಳೆ, ಪಪ್ಪಾಯ, ಕರಿಬೇವು, ಕಾಳುಮೆಣಸು, ಕೋಕೋ, ನೇರಳೆ, ಸೀತಾಫಲ, ಡ್ರ್ಯಾಗಫ್ರೂಟ್ಸ್, ಇತ್ಯಾದಿ ತೋಟಗಾರಿಕೆ ಬೆಳೆಗಳ ಪ್ರದೇಶ ವಿಸ್ತರಣೆ ಹಾಗೂ ಇನ್ನಿತರೆ ಕಾರ್ಯಕ್ರಮಗಳನ್ನು ಅನುಷ್ಟಾನಗೊಳಿಸಲಾಗುತ್ತಿದೆ. ಆಸಕ್ತ ರೈತರು ಅಗತ್ಯ ದಾಖಲಾತಿಗಳೊಂದಿಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಜಗಳೂರು ಕಛೇರಿಗೆ ಅಥವಾ ಆಯಾ ಗ್ರಾಮ ಪಂಚಾಯತಿಗೆ ಸಲ್ಲಿಸಬಹುದು. ಜಾಬ್ ಕಾರ್ಡ್ ರೈತರ ಹೆಸರಿನಲ್ಲಿ ಇರುವುದು ಕಡ್ಡಾಯವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಹೋಬಳಿಮಟ್ಟದ ಸಹಾಯಕ ತೋಟಗಾರಿಕ ಅಧಿಕಾರಿಗಳನ್ನು ಸಂಪರ್ಕಿಸಬಹುದೆಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ತಿಳಿಸಿದ್ದಾರೆ.

### ಪ್ಯಾರಾಮೆಡಿಕಲ್ ಆಫರೇಷನ್ ಥೇಟರ್ ವಿಭಾಗದಲ್ಲಿ ಹೇಮಲತಾಗೆ ಶೇ.98 ಫಲಿತಾಂಶ

» **ಹೊಸದುರ್ಗ**



2024–25 ನೇ ಸಾಲಿನಲ್ಲಿ ನಡೆದ ಪ್ಯಾರಾಮೆಡಿಕಲ್ ವಿಭಾಗದ ಆಪರೇಷನ್ ಧಿಯೇಟರ್ ಟೆಕ್‌ನಿಕ್ಸ್ (ಡಿಓಟಿಟಿ) ವಿಭಾಗದ ಎರಡನೇ ವರ್ಷದ ಪರೀಕ್ಷೆಯಲ್ಲಿ ಪಟ್ಟಣದ ಇಂದಿರಾಗಾಂಧಿ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿನಿ ಹೇಮಲತಾ (ಸಿಂಚನ) ಒಟ್ಟು 300 ಅಂಕಗಳಿಗೆ 282 ಅಂಕಗಳನ್ನು (ಶೇ.98) ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾಳೆ. ಹೇಮಲತಾಗೆ ಕಾಲೇಜಿನ ಆಡಳಿತ ಮಂಡಳಿತ ಮಂಡಳಿಯ ಅಧ್ಯಕ್ಷರಾದ ಎಂ.ಹೆಚ್.ಕೃಷ್ಣಮೂರ್ತಿ ಹಾಗೂ ಉಪನ್ಯಾಸಕ ವರ್ಗ ಮತ್ತು ಸಿಬ್ಬಂಧಿ ವರ್ಗದವರು ಅಭಿನಂದಿಸಿದ್ದಾರೆ.

### 29ಕ್ಕೆ ಸಾರಿಗೆ ಅದಾಲತ್

» **ಚಿತ್ರದುರ್ಗ**

ಪ್ರಾದೇಶಿಕ ಸಾರಿಗೆ ಅಧಿಕಾರಿಗಳವರ ಕಚೇರಿ ವತಿಯಿಂದ ಇದೇ ಏ.29 ರಂದು ಸಂಜೆ 4 ರಿಂದ 5.30 ರವರೆಗೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ಆವರಣದಲ್ಲಿ ಸಾರಿಗೆ ಇಲಾಖೆಗೆ ಸಂಬಂಧಿಸಿದ ಕುಂದುಕೊರತೆ ಆಲಿಸಲು ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ "ಸಾರಿಗೆ ಅದಾಲತ್" ಏರ್ಪಡಿಸಲಾಗಿದೆ. ಸಾರ್ವಜನಿಕರು ಸಾರಿಗೆ ಅದಾಲತ್‌ನಲ್ಲಿ ಭಾಗವಹಿಸಿ ಇಲಾಖೆಗೆ ಸಂಬಂಧಿಸಿದ ಕುಂದುಕೊರತೆಗಳನ್ನು ಹಾಗೂ ತಮ್ಮ ಅಹವಾಲುಗಳನ್ನು ಸಲ್ಲಿಸಿ ಪರಿಹಾರ ಪಡೆದುಕೊಳ್ಳಬೇಕು ಹಾಗೂ ಸಾರಿಗೆ ಅದಾಲತ್‌ನ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು.

# ರೋಟರಿಯಿಂದ ಸುಸಜ್ಜಿತ ಡಯಾಲಿಸಿಸ್ ಕೇಂದ್ರ

» **ಚಿತ್ರದುರ್ಗ**

ರೋಟರಿ ಕ್ಲಬ್ ಆಫ್ ಚಿತ್ರದುರ್ಗ ನಗರದಲ್ಲಿ ಹತ್ತು ಹಾಸಿಗೆಗಳ ಡಯಾಲಿಸಿಸ್ ಕೇಂದ್ರ, ಕೌಶಲ್ಯಾಭಿವೃದ್ಧಿ ಕೇಂದ್ರ ಪಿಸಿಯೋಥೆರಪಿ ಸೆಂಟರ್, ಲ್ಯಾಬೋರೇಟರಿ ಸ್ಥಾಪನೆ ಮಾಡಲಾಗಿದೆ ಎಂದು ರೋಟರಿ ಟ್ರಸ್ಟ್‌ನ ಕಾರ್ಯದರ್ಶಿ ಕೆ.ಮಧುಪ್ರಸಾದ್ ತಿಳಿಸಿದರು.

ಚಿತ್ರದುರ್ಗ ನಗರದ ಎಸ್.ಆರ್.ಬಿ.ಎಂ.ಎಸ್ ಭಾಲಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ನಗರದ ವ್ಯಾಪಾರೋದ್ದಿಮೆಗಳಾದ ಎಸ್.ಆರ್.ಬಿ.ಎಂ.ಎಸ್.ನ ಮಾಲೀಕರಾದ ಲಕ್ಷಿಕಾಂತರೆಡ್ಡಿ ಹಾಗೂ ಎಸ್. ವೀರೇಶ್ ದೇಣಿಗೆಯಿಂದ ಚಳ್ಳಕೆರೆ ರಸ್ತೆಯಲ್ಲಿನ ಕೃಷ್ಣಪ್ಪ ಲೇ ಔಟ್‌ನಲ್ಲಿ ಸ್ಥಳವನ್ನು ಪಡೆಯಲಾಗಿದ್ದು ರೋಟರಿ ಸೇವಾ ಭವನವನ್ನು ಚಿತ್ರದುರ್ಗ ರೋಟರಿ ಟ್ರಸ್ಟನ ಅಡಿಯಲ್ಲಿ ನಿರ್ಮಿಸಲಾಗಿದೆ ಎಂದರು.

ಕಿಡ್ನಿ ರೋಗಿಗಳಿಗೆ ಉತ್ತಮ ಚಿಕಿತ್ಸಾ ಸೌಲಭ್ಯಗಳನ್ನು ಒದಗಿಸುವ ಉದ್ದೇಶದಿಂದ ರೋಟರಿ ಕ್ಲಬ್ ಆಫ್ ಚಿತ್ರದುರ್ಗ ನಗರದಲ್ಲಿ ಹತ್ತು ಹಾಸಿಗೆಗಳ ಡಯಾಲಿಸಿಸ್ ಕೇಂದ್ರವನ್ನು ಸ್ಥಾಪಿಸಿದೆ ಮತ್ತು ಯಂತ್ರಗಳು, ಕಟ್ಟಡಗಳು, ಸೋಲಾರ್ ಪ್ಯಾನಲ್‌ಗಳ ಸಂಪೂರ್ಣ ವೆಚ್ಚವನ್ನು ನಗರದ ರೋಟರಿ ಕ್ಲಬ್ ಸದಸ್ಯರು ಭರಿಸಿದ್ದಾರೆ ಎಂದು ತಿಳಿಸಿದರು.

ಸೆಲ್ಕೋ ಫೌಂಡೇಶನ್ ಸೋಲಾರ್ ಪ್ಯಾನಲ್‌ಗಳು, ಬ್ಯಾಟರಿಗಳು ಮತ್ತು ಅಗತ್ಯ ಉಪಕರಣಗಳನ್ನು ಅಳವಡಿಸಿರುವ





ಸೌರಶಕ್ತಿಯ ಮೇಲೆ ಇಡೀ ಕಟ್ಟಡವು ನಿರ್ಮಾಣ ಮಾಡಲಾಗಿದೆ. ಸೆಲ್ಕೋ ಫೌಂಡೇಶನ್‌ನಿಂದ ಬೆಂಬಲಿತವಾದ 22 ಕಿಲೋ ವ್ಯಾಟ್ ಸೋಲಾರ್ ವ್ಯವಸ್ಥೆಯನ್ನು ಈಗಾಗಲೇ ರೂ 30 ಲಕ್ಷ ವೆಚ್ಚದಲ್ಲಿ ಸ್ಥಾಪಿಸಲಾಗಿದೆ. ಆಸ್ಪತ್ರೆಗೆ ದಿನಕ್ಕೆ 50 ರಿಂದ 60 ಯೂನಿಟ್ ವಿದ್ಯುತ್ ಅಗತ್ಯವಿದ್ದು, ಸಂಪೂರ್ಣ ಆಸ್ಪತ್ರೆ ಸೌರಶಕ್ತಿಯಿಂದ ನಡೆಯುತ್ತದೆ ಎಂದರು.ಚಿತ್ರದುರ್ಗ ಜಿಲ್ಲೆ ಮತ್ತು ಅಕ್ಕಪಕ್ಕದ ಪಟ್ಟಣಗಳ ಪಾಲಕರ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ನಾವು ನಗರದಲ್ಲಿ ಹತ್ತು ಡಯಾಲಿಸಿಸ್ ಂ ು ಂ ಂ ತ್ರೋಪ ಕ ರ ಣ ಗ ಳ ನ್ನ ು ಸ್ಥಾಪಿಸಲಾಗಿದ್ದು, ಇದರ ಸಂಪೂರ್ಣ ವೆಚ್ಚವನ್ನು ರೋಟರಿ ಕ್ಲಬ್ ಸದಸ್ಯರು ಭರಿಸುತ್ತಿದ್ದಾರೆ. ಬಡ ಮತ್ತು ನಿರ್ಗತಿಕ ರೋಗಿಗಳಿಗೆ ಕೈಗೆಟುಕುವ ದರದಲ್ಲಿ ಅವರ ಆರ್ಥಿಕ ಪರಿಸ್ಥಿತಿಗಳ ಆಧಾರದ ಮೇಲೆ ಚಿಕಿತ್ಸೆ ನೀಡಲಾಗುತ್ತದೆ, ಶುಲ್ಕಗಳು ಇನ್ನೂ ನಿಗದಿಯಾಗಿಲ್ಲ ಎಂದು ಅವರು ಆಶಾಕಿರಣ ಡಯಾಲಿಸಿಸ್ ಸೆಂಟರ್,ಶ್ರೀ ಕನ್ಯಕಾಪರಮೇಶ್ವರಿ ಸೌಹಾರ್ದ ಸಹಕಾರಿ ಕೌಶಲ್ಯಾಭಿವೃದ್ಧಿ ಕೇಂದ್ರ, ನಿರ್ಮಲಾ ಕೀರ್ತಿಕುಮಾರ್ ಪಿಸಿಯೋಥೆರಪಿ ಸೆಂಟರ್, ಲ್ಯಾಬೋರೇಟರಿ, ಕ್ಲಿನಿಕ್ ಹಾಗೂ ಫಾರ್ಮಸಿ ಸೌಲಭ್ಯವನ್ನು ಹೊಂದಿದೆ ಎಂದು ತಿಳಿಸಿದರು.

ಕೈಗಾರಿಕೋದ್ಯಮಿಗಳಾದ ಪ್ರವೀಣ ಚಂದ್ರರವರು ತಿಂಗಳು 200 ಡಯಾಲಿಸಿಸ್‌ಗಳನ್ನು ಉಚಿತವಾಗಿ ಪ್ರಾಯೋಜಿಸಿದ್ದಾರೆ. ಈ ಕಟ್ಟಡವನ್ನು ಅತ್ಯಂತ ಸುಂದರವಾಗಿ ನಿರ್ಮಿಸಲಾಗಿದ್ದು. ಡಯಾಲಿಸಿಸ್ ಕೇಂದ್ರದ ಅನುಕೂಲಕ್ಕಾಗಿ ಹವಾನಿಯಂತ್ರಣ ಸೌಲಭ್ಯವನ್ನು ಒದಗಿಸಲಾಗಿದೆ. ಕೌಶಲ್ಯ ಅಭಿವೃದ್ಧಿ ಕೇಂದ್ರಕ್ಕೆ ಶಿರಸಿಯ ಯುವಜಯ ಪೌಂಡೇಷನ್‌ನ ಸಹಯೋಗ ಪಡೆದಿದ್ದು ಇದರಲ್ಲಿ ಬಿ.ಎ.ಬಿಕಾಂ,ಬಿಎಸ್ಸಿ ಪಧವೀದರದಿಗೆ 2–3 ತಿಂಗಳ ತರಬೇತಿಯನ್ನು ಸಂವಹನ ಕಲೆ. ಟೀಮ್ ವರ್ಕ್ ಇಂಗ್ಲಿಷ್ ಸಂಭಾಷಣೆ ಹಾಗೂ ಇತರ ವಿಷಯಗಳಲ್ಲಿ ನೀಡಿ ಅವರಿಗೆ ಉದ್ಯೋಗ ಕೊಡಿಸುವ ಪ್ರಯತ್ನ ಮಾಡಲಾಗುವುದು ಎಂದರು.

ಈ ದಿಶೆಯಲ್ಲಿ ಈಗಾಗಲೇ ಶಿರಸಿಯ ಯುವಜಯ ಫೌಂಡೇಷನ್ ಕಾರ್ಯ ನಿರ್ವಹಿಸುತ್ತಿದ್ದು, ಸುಮಾರು 50ಕ್ಕೂ ಹೆಚ್ಚು ಕಂಪನಿಗಳ ಜೊತೆ ಸಂಪರ್ಕವನ್ನು ಹೊಂದಿದೆ. ಇದರಿಂದ ಚಿತ್ರದುರ್ಗ ಜಿಲ್ಲೆಯ ಯುವಕ ಯುವತಿಯರಿಗೆ ಅನುಕೂಲವಾಗಲಿದೆ. ಡಯಾಲಿಸಿಸ್ ಕೇಂದ್ರದ ಉಪಕರಣಗಳಿಗಾಗಿ ರೋಟರಿ ಪೌಂಡೇಷನ್‌ನಿಂದ ಒಂದು ಕೋಟಿ ಹನ್ನೆರಡು ಲಕ್ಷ ರೂಪಾಯಿಗಳ ಗ್ರಾಂಟ್‌ನ್ನು ಪಡೆಯಲಾಗಿದೆ ಎಂದು ತಿಳಿಸಿದರು.

ಈ ಎಲ್ಲಾ ಸೌಲಭ್ಯಗಳ ನಿರ್ಮಾಣದಲ್ಲಿ ಹಲವಾರು ಸಂಘ ಸಂಸ್ಥೆಗಳ ಸಹಾಯ / ಸಹಯೋಗ ಪಡೆಯ ಲಾಗಿದ್ದು ಈ ಸೌಲಭ್ಯಗಳನ್ನು ಅತ್ಯಂತ ಕಡಿಮೆ ವೆಚ್ಚದಲ್ಲಿ ಹಾಗೂ ತುಂಬಾ ಕಡುಬಡವರಿಗೆ ಉಚಿತವಾಗಿ ನೀಡಲು ಉದ್ದೇಶಿಸಿಲಾಗಿದ್ದು. ಈ ಕಾರ್ಯದಲ್ಲಿ ನಗರದ ಎಲ್ಲಾ ದಾನಿಗಳ / ಸಾರ್ವಜನಿಕರ ಸಹಕಾರವನ್ನು ಕೋರಲಾಗಿದೆ. ಈ ಕೇಂದ್ರವೂ ಇದೇ ತಿಂಗಳ 30ರಂದು ಬುಧವಾರ ಬಸವ ಜಯಂತಿ/ ಅಕ್ಷಯ ತೃತೀಯದ ಶುಭದಿನದಿಂದು ಉದ್ಘಾಟನೆಯಾಗಲಿದೆ ಎಂದರು.ರೋಟರಿ ಟ್ರಸ್ಟ್‌ನ ಅಧ್ಯಕ್ಷ ಪಿ.ಎಸ್.ಶಂಭುಲಿಂಗಪ್ಪ ಮಾತನಾಡಿ, ಏ. 30 ರಂದು ನಡೆಯುವ ಕಾರ್ಯಕ್ರಮವನ್ನು ಜಿಲ್ಲಾ ಗವರ್ನರ್ ಡಾ. ಸಾಧು ಗೋಪಾಲ ಕೃಷ್ಣಉದ್ಘಾಟನೆಯನ್ನು ಮಾಡಲಿದ್ದಾರೆ. ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್, ಸಂಸದರಾದ ಗೋವಿಂದ ಕಾರಜೋಳ, ಶಾಸಕರಾದ ಕೆ.ಸಿ. ವೀರೇಂದ್ರ ಪಪ್ಪಿ, ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್. ನವೀನ್, ಮರ್ಚೆಂಟ್ಸ್ ಬ್ಯಾಂಕ್ ಅಧ್ಯಕ್ಷರಾದ ಎಸ್.ಆರ್. ಲಕ್ಷ್ಮೀಕಾಂತ ರೆಡ್ಡಿ, ಜಿಲ್ಲಾ ಅರೋಗ್ಯ ಅಧಿಕಾರಿ ರೇಣುಪ್ರಸಾದ್, ರೋಟೇರಿಯನ್ ಪಿಡಿಜಿ. ರವಿ ವಡ್ಲಮಣಿ, ಪಿಡಿಜಿ. ಬಿ.ಚಿನ್ನಪ್ಪ ರೆಡ್ಡಿ, ಡಿಇಜಿ ರವೀಂದ್ರ, ಪಿಡಿಜಿ ರಮೇಶ್ ವಂಗಲ, ಭಾಗವಹಿಸಲಿದ್ದಾರೆ ಎಂದರು.

ರೋಟರಿ ಕ್ಲಬ್‌ನ ಅಧ್ಯಕ್ಷರಾದ ಜಿ.ಎನ್ ವೀರಣ್ಣ, ಎಸ್,ವೀರೇಶ್, ಕೆ.ಎಸ್. ಚಂದ್ರಮೋಹನ್, ಶ್ರೀಮತಿ ಜಯಶ್ರೀ ಷಾ, ತರುಣ್ ಷಾ, ಮೂರ್ತಿ, ವೆಂಕಟೇಶ್, ವಿಶ್ವನಾಥ್, ಸೂರ್ಯನಾರಾಯಣ ಉಪಸ್ಥಿತರಿದ್ದರು.

# ಪಹಲ್ಗಾಮ್ ದಾಳಿ: ಭಾರತೀಯರಿಗೆ ಶ್ರದ್ಧಾಂಜಲಿ

» **ಚಳ್ಳಕೆರೆ**

ಕಾಶ್ಮೀರದ ಪಹಲ್ಗಾಮ್ ಪ್ರದೇಶದಲ್ಲಿ ನಡೆದ ಘಟನೆಯನ್ನು ವಿಶ್ವ ಹಿಂದೂ ಪರಿಷತ್, ಭಜರಂಗದಳ, ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಖಂಡಿಸಿ, ಘಟನೆಯಲ್ಲಿ ಮಡಿದವರಿಗೆ ಶ್ರದ್ಧಾಂಜಲಿ ಅರ್ಪಿಸಿದರು.

ವಿಶ್ವ ಹಿಂದೂ ಪರಿಷತ್ ಜಿಲ್ಲಾ ಉಪಾಧ್ಯಕ್ಷ ಡಾ.ಡಿ.ಎನ್.ಮಂಜುನಾಥ ಮಾತನಾಡಿ, ಕಾಶ್ಮೀರದ ಪಹಲ್ಗಾಮ್ ಪ್ರದೇಶದಲ್ಲಿ ಕುಟುಂಬದೊಡನೆ ಪ್ರವಾಸಕ್ಕೆ ತೆರಳಿದ ವೇಳೆ ನಿದ್ರಾಕ್ಷಣ್ಯವಾಗಿ ಅವರ ಮೇಲೆ ಗುಂಡು ಹಾರಿಸಿ ಸಾವಿಗೆ ಕಾರಣರಾದ ಪಾಕಿಸ್ತಾನ ಪ್ರೇರಿತ ಭಯೋತ್ಪಾದನ ಚಟುವಟಿಕೆಯನ್ನು ನಾವೆಲ್ಲರೂ ಖಂಡಿಸಬೇಕು. ಮುಂಬರುವ ದಿನಗಳಲ್ಲಿ ಪಾಕಿಸ್ತಾನ ತಾನು ಪ್ರೇರೇಪಿಸಿದ ಹೀನಕೃತ್ಯಕ್ಕೆ ಪಶ್ಚಾತಾಪ ಪಡೆಬೇಕಾಗುತ್ತದೆ ಎಂದರು.

ವಾಲ್ಮೀಕಿ ವೃತ್ತದಿಂದ ಅಂಬೇಡ್ಕರ್, ನೆಹರೂ ವೃತ್ತಕ್ಕೆ ಆಗಮಿಸಿದ ಹಿಂದೂಬಂಧುಗಳು ಮಾನವ ಸರಪಳಿ ರಚಿಸಿ ಪ್ರತಿಭಟಿಸಿದರಲ್ಲದೆ, ಉಗ್ರಗಾಮಿಗಳ ಗುಂಡಿಗೆ ಬಲಿಯಾದವರಿಗೆ ದೀಪಹಚ್ಚಿ ಶ್ರದ್ಧಾಂಜಲಿಯನ್ನು ಸಲ್ಲಿಸಿದರು. ಇಡೀ ಮೆರವಣಿಯುದ್ದಕ್ಕೂ ಉಗ್ರಗಾಮಿಗಳ ವಿರುದ್ಧ ಘೋಷಣೆಗಳು ಕೂಗಿದರು.

ಬಿಜೆಪಿ ಯುವ ಮೋರ್ಚಾ ಮಾಜಿ ಜಿಲ್ಲಾಧ್ಯಕ್ಷ ಕಾಲುವೇಹಳ್ಳಿ ಪಾಲಯ್ಯ ಮಾತನಾಡಿ, ದೇಶದಲ್ಲಿ ಸುಮಾರು 140ಕೋಟಿ ಜನಸಂಖ್ಯೆ ಇದೆ. ಇದರಲ್ಲಿ ಶೇ. 15ರಷ್ಟು ಮಾತ್ರ ಅಲ್ಪಸಂಖ್ಯಾತರು ಇದ್ದಾರೆ. ನೂರಾರು ವರ್ಷಗಳಿಂದ ಭಾರತದಲ್ಲಿ ನೆಮ್ಮದಿಯ ಬದುಕನ್ನು ಸಾಗಿಸುತ್ತಿದ್ದಾರೆ.




ಆದರೂ ಸಹ ಒಮ್ಮೆಮ್ಮೆ ಪಾಕಿಸ್ತಾನದ ಪ್ರೇರಿತ ಭಯೋತ್ಪಾದನೆಗೆ ಸಹಕಾರ ನೀಡುತ್ತಿರುವುದು ನೋವಿನ ಸಂಗತಿ ಎಂದರು.

ಖ್ಯಾತಜ್ಯೋತಿಷಿ ಡಾ.ಅನಂತರಾಮ್ ಗೌತಮ್ ಮಾತನಾಡಿ, ಭಯೋತ್ಪಾದನೆ ಎಂಬುವುದು ಭಾರತಕ್ಕೆ ಶಾಪವಾಗಿ ಪರಿಣಮಿಸಿದೆ. ಕೋಟ್ಯಾಂತರ ಹಿಂದೂಗಳ ಭಾವನೆಗೆ ಧಕ್ಕೆಯಾಗುವ ಹಿಂದೂಗಳ ಸ್ವಾಭಿಮಾನವನ್ನು ಕೆಣಕುವ ರೀತಿ ಉಗ್ರಗಾಮಿಗಳು ತಮ್ಮ ಕೃತ್ಯಗಳನ್ನು ಎಸಗುತ್ತಿದ್ದಾರೆ. ಇದಕ್ಕೆ ತಕ್ಕ ಉತ್ತರ ಕೇಂದ್ರ ಸರ್ಕಾರ ನೀಡಬೇಕೆಂದರು.

ಬಾಳೆಮಂಡಿರಾಮದಾಸ್,ಡಿ.ಎಂ.ತಿಪ್ಪೇಸ್ವಾಮಿ, ಡಾ.ಕೆ.ಎಂ.ಜಯಕುಮಾರ್, ಡಾ.ವೀರೇಶ್, ತಿಪ್ಪೇಸ್ವಾಮಿ(ಪಿಟಿ), ಶ್ರೀನಿವಾಸ್, ಪ್ರಮೋದ್, ಡಾ.ನಾಗರಾಜು, ಭಜರಂಗದಳದ ಉಮೇಶ್, ಮಹಂತೇಶ್, ಟಿ.ಮಂಜುನಾಥ, ಬೇಕರಿಮಂಜುನಾಥ, ಈಶ್ವರನಾಯಕ, ಕೆ.ಎಂ. ಯತೀಶ್, ಎಂ.ಸತ್ಯನಾರಾಯಣರಾವ್, ಡಿ.ಜಿ.ಪ್ರಕಾಶ್, ಕೆ.ಪಿ.ನಾಗಭೂಷಣ್, ಎಸ್. ಎಂ.ಗಂಗಾಧರಯ್ಯ, ಆರ್.ಜಗದೀಶ್, ಸಿ.ಎಸ್. ಗೋಪಿನಾಥ, ಮಧುಮತಿ, ಶುಭಾ, ಜಗದಾಂಭ, ಶಾಂತಲಾ ಮುಂತಾದವರು ಪಾಲ್ಗೊಂಡಿದ್ದರು. ಡಿವೈಎಸ್ಪಿ ಟಿ.ಬಿ.ರಾಜಣ್ಣ, ಠಾಣಾ ಇನ್ಸ್‌ಪೆಕ್ಟರ್ ರಾಜಫಕೃದ್ದೀನ್‌ದೇಸಾಯಿ, ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ಸೂಕ್ತಬಂದೋಬಸ್ತ್ ಏರ್ಪಡಿಸಿದ್ದರು.

## ಮೀರಸಾಬಿಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ವಿಶ್ವಮಲೇರಿಯಾ ನಿಯಂತ್ರಣ ಜಾಗೃತಿ ಜಾಥ




» **ಚಳ್ಳಕೆರೆ**

ತಾಲ್ಲೂಕಿನ ಮೀರಸಾಬಿಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವಿಶ್ವಮಲೇರಿಯಾ ದಿನಾಚರಣೆ ಅಂಗವಾಗಿ ಜಾಗೃತಿ ಜಾಥವನ್ನು ಹಮ್ಮಿಕೊಂಡಿದ್ದರು. ಆಸ್ಪತ್ರೆಯ ಆರೋಗ್ಯ ನಿರೀಕ್ಷಣಾಧಿಕಾರಿ ಸಿ.ಎನ್.ನವೀನ್‌ಕುಮಾರ್ ಜಾಥಕ್ಕೆ ಚಾಲನೆ ನೀಡಿದರು. ಪ್ರತಿವರ್ಷ ಆರೋಗ್ಯ ಇಲಾಖೆ ವಿಶ್ವ ಮಲೇರಿಯಾ ದಿನಾಚರಣೆ ಅಂಗವಾಗಿ ಜಾಗೃತಿ ಜಾಥ ನಡೆಸುವ ಮೂಲಕ ಸಾರ್ವಜನಿಕರಲ್ಲಿ ಆರೋಗ್ಯದ ಹರಿವು ಮೂಡಿಸಲಾಗುತ್ತಿದೆ. ಮಲೇರಿಯಾ ರೋಗ ವಿಶೇಷವಾಗಿ ಸೊಳ್ಳೆಗಳಿಂದ ಹರಡುತ್ತದೆ. ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಸ್ವಚ್ಛತೆಯನ್ನು ಕಾಪಾಡಿಕೊಂಡರೆ ಮಾತ್ರ ಮಲೇರಿಯಾವನ್ನು ನಿಯಂತ್ರಿಸಬಹುದು. ಪ್ರತಿನಿತ್ಯ ಮಲಗುವ ಸಂದರ್ಭದಲ್ಲಿ ಸೊಳ್ಳೆಪರದೆ ಬಳಸಿ ಸೊಳ್ಳೆಯ ಕಾಟದಿಂದ ಮುಕ್ತಿ ಪಡೆಯುವಂತೆ ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ಸುರಕ್ಷತ ಅಧಿಕಾರಿ ಕೆ.ಸುಲೋಚಮ್ಮ, ಆರೋಗ್ಯಾಧಿಕಾರಿ ಕೆ.ಸ್ನೇಹ, ಫಾರ್ಮಸಿ ಅಧಿಕಾರಿ ಟಿ.ಶಂಕರ್, ವಿಕ್ರಮ್, ನರ್ಸಿಂಗ್ ಅಧಿಕಾರಿ ಚಾಂದ್ ಬಿ, ಪೂರ್ಣಸಾಗರ್, ಶ್ರೀನಿವಾಸ್, ಸರೋಜಮ್ಮ, ಸಂಜಯ್ ಮುಂತಾದವರು ಪಾಲ್ಗೊಂಡಿದ್ದರು.

## ಪ್ರಮುಖ ಸುದ್ದಿ

# ಅಸಮತೋಲನ: 10 ವರ್ಷ ಅವಧಿಗೆ ವಿಶೇಷ ಯೋಜನೆ ಅಗತ್ಯ

» **ಮೊದಲ ಪುಟದಿಂದ**

ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ 1 ತಾಲ್ಲೂಕು ಅತ್ಯಂತ ಹಿಂದುಳಿದ ತಾಲ್ಲೂಕು ಹಾಗೂ 5 ತಾಲ್ಲೂಕುಗಳು ಹಿಂದುಳಿದ ತಾಲ್ಲೂಕುಗಳಾಗಿವೆ. ರೂ. 3724 ಕೋಟಿ ರೂಪಾಯಿ ಕೆಎಂಇಆರ್‌ಸಿ ಅನುದಾನದಡಿಯಲ್ಲಿ ಹೊಳಲ್ಕೆರೆ, ಹೊಸದುರ್ಗ ಹಾಗೂ ಚಿತ್ರದುರ್ಗ ತಾಲ್ಲೂಕುಗಳು ಅಭಿವೃದ್ಧಿಯಾಗುತ್ತಿವೆ. ಉಳಿದ ಮೂರು ತಾಲ್ಲೂಕುಗಳಾದ ಚಳ್ಳಕೆರೆ, ಹಿರಿಯೂರು ಹಾಗೂ ಮೊಳಕಾಲ್ಮೂರು ತಾಲ್ಲೂಕುಗಳ ಅಭಿವೃದ್ಧಿಗೆ ಬೇರೆ ವಿಧದಲ್ಲಿ ಸರ್ಕಾರ ಅನುದಾನ ಒದಗಿಸಿದರೆ ಅನುಕೂಲವಾಗಲಿದೆ. ಚಳ್ಳಕೆರೆ ತಾಲ್ಲೂಕಿನಲ್ಲಿ ಡಿಆರ್‌ಡಿಒ, ಇಸ್ರೋ, ಬಾರ್ಕ್, ಇಂಡಿಯನ್ ಇನ್ಸಿಟ್ಯೂಟ್ ಆಫ್ ಸೈನ್ಸ್ ಅಂತಹ ಸಂಸ್ಥೆಗಳು ಇರುವುದರಿಂದ ಚಿತ್ರದುರ್ಗ ಜಿಲ್ಲೆಗೆ ಇಂಡಸ್ಟ್ರೀಯಲ್ ಕಾರಿಡಾರ್ ಬಂದರೆ ಈ ಭಾಗಕ್ಕೆ ಪೂರಕವಾಗಿರಲಿದೆ ಎಂದು ಶಾಸಕ ಟಿ.ರಘುಮೂರ್ತಿ ಅಭಿಪ್ರಾಯಪಟ್ಟರು.

**ಅನುದಾನ ಶಕ್ತಿವಂತರ ಪಾಲು ಶಾಸಕ ಗೋಪಾಲಕೃಷ್ಣ ಅಸಮಧಾನ:** ಡಿ.ಎಂ.ನಂಜುಂಡಪ್ಪ ವರದಿ ಹಿನ್ನಲೆಯಲ್ಲಿ ಸರ್ಕಾರ ಅನುದಾನ ಬಿಡುಗಡೆ ಮಾಡಿದರೂ, ಈ ಅನುದಾನ ಅಧಿಕಾರ ಹಾಗೂ ಪ್ರಭಾವ ಹೊಂದಿರುವ ಸಚಿವರು ಹಾಗ ಶಕ್ತಿವಂತರ ಪಾಲಾಗುತ್ತಿದೆ. ಅತ್ಯಂತ ಹಿಂದುಳಿದ ತಾಲ್ಲೂಕುಗಳಲ್ಲಿ ವಿಶೇಷ ಅಭಿವೃದ್ಧಿ ಕಾರ್ಯಕ್ರಮ ಹೆಸರಿಗಷ್ಟೇ ನೀಡುವಂತಾಗಿದೆ. ಯಾವುದೇ ಪ್ರಗತಿ ಕಾರ್ಯಗಳು ಆಗಿಲ್ಲ ಎಂದು ಮೊಳಕಾಲ್ಮೂರಿನ ಹಿರಿಯ ಶಾಸಕ ಗೋಪಾಲಕೃಷ್ಣ ಅಸಮಧಾನ ವ್ಯಕ್ತ ಪಡಿಸಿದರು.



ಕಲ್ಯಾಣ ಕರ್ನಾಟಕ ಭಾಗದ ಸಚಿವರು ಉತ್ತಮ ನೀರಾವರಿ ಯೋಜನೆಗಳನ್ನು ರೂಪಿಸಿ, ಕೋಟ್ಯಾಂತರ ರೂಪಾಯಿಗಳ ಅನುದಾನ ಪಡೆದು ಅನುಷ್ಠಾನಗೊಳಿಸಿದ್ದಾರೆ. ಆದರೆ ತಾಲ್ಲೂಕಿಗೆ ನೀರಾವರಿ ಯೋಜನೆ ತರವಲ್ಲಿ ಸಾಕಷ್ಟು ವಿಳಂಬವಾಯಿತು. ಕುಡಿಯುವ ನೀರು, ಶಿಕ್ಷಣ, ಆರೋಗ್ಯ ಕ್ಷೇತ್ರದಲ್ಲಿ ಅಭಿವೃದ್ಧಿಯಾಗಿಲ್ಲ. ಮಾನವೀಯ ನೆಲೆಗಟ್ಟಿನಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿ ಅತ್ಯಂತ ಹಿಂದುಳಿದ ಮೊಳಕಾಲ್ಮೂರು ತಾಲ್ಲೂಕಿಗೆ ಹೆಚ್ಚಿನ ಅನುದಾನ ಶಿಫಾರಸ್ಸು ಮಾಡುವಂತೆ ಶಾಸಕ ಗೋಪಾಲಕೃಷ್ಣ ಹೇಳಿದರು.

**ಪ್ರವಾಸೋದ್ಯಮಕ್ಕೆ ಹೆಚ್ಚಿನ ಒತ್ತು ನೀಡಲು ಶಾಸಕ ವೀರೇಂದ್ರ ಪಪ್ಪಿ ಮನವಿ:** ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಮಾತನಾಡಿ, ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಹೇರಳ ಅವಕಾಶವಿದೆ. ಪ್ರವಾಸೋದ್ಯಮಕ್ಕೆ ಹೆಚ್ಚು ಒತ್ತು ನೀಡಿದಷ್ಟು ಜಿಲ್ಲೆಯು ಅಭಿವೃದ್ಧಿ ಜೊತೆಗೆ ಸ್ವಯಂ ಉದ್ಯೋಗವೂ ಸೃಷ್ಟಿಯಾಗಲಿದೆ. ದುರ್ಗದ ಏಳು ಸುತ್ತಿನ ಕೋಟೆ, ಚಂದ್ರವಳ್ಳಿ, ದವಳಪ್ಪನಗುಡ್ಡ, ಆಡುಮಲ್ಲೇಶ್ವರ, ಜೋಗಿಮಟ್ಟಿ, ಪುರಾತನ ದೇಗುಲಗಳು, ನಾಯಕನಹಟ್ಟಿ ಶ್ರೀ ಗುರು ತಿಪ್ಪೇರುದ್ರಸ್ವಾಮಿ, ಹೊಸದುರ್ಗದ ಹಾಲುರಾಮೇಶ್ವರ, ವಿ.ವಿ.ಸಾಗರದಲ್ಲಿ ಬೋಟಿಂಗ್ ಮಾಡಲು ಅವಕಾಶವಿದೆ. ಹಾಗಾಗಿ ಪ್ರವಾಸೋದ್ಯಮ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿದರೆ ಅನುಕೂಲವಾಗಲಿದೆ ಎಂದರು. ಚಿತ್ರದುರ್ಗಕ್ಕೆ ವಿಶೇಷವಾಗಿ ಉದ್ದಿಮೆಯ ಅವಶ್ಯಕತೆ ಇದೆ. ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿ ಪ್ರಗತಿಯಲ್ಲಿದ್ದು, ಈ ಯೋಜನೆ ಪೂರ್ಣಗೊಂಡರೆ ಕೃಷಿಕರಿಗೆ ಸ್ವಲ್ಪಮಟ್ಟಿಗೆ ಅನುಕೂಲವಾಗಲಿದೆ. ಚಿತ್ರದುರ್ಗ ನಗರದಲ್ಲಿ ಬಹಳಷ್ಟು ಸಮಸ್ಯೆಗಳಿದ್ದು, ಕೊಳಚೆ ಪ್ರದೇಶಗಳ ಸಂಖ್ಯೆ ಹೆಚ್ಚಾಗಿದೆ. ಮೂಲಭೂತ ಸೌಕರ್ಯಗಳ ಕೊರತೆ ಇದೆ. ಯುಜಿಡಿ ಕಾಮಗಾರಿಗಳು ಕಳಪೆಯಾಗಿದ್ದು, ಇದು ತುರ್ತಾಗಿ ಸರಿಯಾಗಬೇಕಿದೆ. ಇಲ್ಲಿನ ಬಹಳ ಜನರಿಗೆ ವಸತಿ ಯೋಜನೆಗಳ ಅವಶ್ಯಕತೆ ಇದೆ ಎಂದು ಹೇಳಿದರು.

**ಗಣಿ ಪುನಶ್ಚೇತನಕ್ಕೆ ರೂ.100 ಕೋಟಿ ಬಿಡುಗಡೆಗೆ ಶಾಸಕ ಕೆ.ಎಸ್.ನವೀನ್ ಮನವಿ:** ವಿಶೇಷ ಅಭಿವೃದ್ಧಿ ಯೋಜನೆಯಡಿ ಜಿಲ್ಲೆಗೆ ಬಿಡುಗಡೆಯಾದ ಅನುದಾನ ಸಂಪೂರ್ಣ ಪ್ರಮಾಣದಲ್ಲಿ ಬಳಕೆಯಾಗಿಲ್ಲ. ಅನುಷ್ಠಾನದಲ್ಲಿ ಲೋಪ ಉಂಟಾಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ. ಜಿಲ್ಲೆಯ ತಾಮ್ರ ಅದಿರಿನ ಗಣಿಗಾರಿಕೆಯನ್ನು ಹಟ್ಟಿ ಚಿನ್ನದ ಗಣಿ ಕಂಪನಿಯಲ್ಲಿ ವಿಲೀನ ಮಾಡಲಾಗಿದೆ. ಸದ್ಯ ಜಿಲ್ಲೆಯ ತಾಮ್ರ ಗಣಿಗಾರಿಕೆ ಮುಚ್ಚಿದೆ. ಪ್ರಸ್ತುತ ತಾಮ್ರಕ್ಕೆ ಹೆಚ್ಚಿನ ಬೇಡಿಕೆ ಇದ್ದು, ಹಟ್ಟಿ ಚಿನ್ನದ ಗಣಿ ಕಂಪನಿ ವಾರ್ಷಿಕವಾಗಿ ರೂ.1000 ಕೋಟಿ ಲಾಭಮಾಡುತ್ತಿದೆ. ಇದರಲ್ಲಿ ಜಿಲ್ಲೆಯ ತಾಮ್ರ ಅದಿರಿನ ಗಣಿ ಪುನಶ್ಚೇತನಕ್ಕೆ ರೂ.100 ಕೋಟಿ ಬಿಡುಗಡೆ ಮಾಡಿದರೆ,ಜನರಿಗೆ ಉದ್ಯೋಗವಕಾಶಗಳು ದೊರಕುತ್ತವೆ. ಹೊಸದುರ್ಗ ತಾಲ್ಲೂಕನ್ನು ರಾಷ್ಟ್ರೀಯ ಸಿರಿಧಾನ್ಯಗಳ ವಲಯವನ್ನಾಗಿ ಘೋಷಿಸಿ ವಿಶೇಷ ಯೋಜನೆಗೆ ಶಿಫಾರಸ್ಸು ಮಾಡುವಂತೆ ವಿಧಾನ ಪರಿಷತ್ ಶಾಸಕ ಕೆ.ಎಸ್.ನವೀನ್ ಮನವಿ ಮಾಡಿದರು.

ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಮಾತನಾಡಿ, ಜಿಲ್ಲೆಯ 100 ವರ್ಷಗಳ ಇತಿಹಾಸದಲ್ಲಿ 79 ವರ್ಷ ಬರಗಾಲಕ್ಕೆ ತುತ್ತಾಗಿದೆ. ಶೇ.30ರಷ್ಟು ಜನರು ಬೆಂಗಳೂರಿಗೆ ಕೆಲಸ ಹುಡುಕಿಕೊಂಡು ಹೋಗುತ್ತಾರೆ. ಈ ಹಿಂದೆ ನಂಜುಂಡಪ್ಪ ವರದಿ ಆಧಾರಿಸಿ ನೀಡಿದ ವಿಶೇಷ ಅಭಿವೃದ್ಧಿ ಯೋಜನೆ ಅನುದಾನದಿಂದ ಸರ್ವಾಂಗೀಣ ಅಭಿವೃದ್ಧಿ ಆಗಿಲ್ಲ. ಆದ್ದರಿಂದ ಸಮಿತಿಯು ಶಿಕ್ಷಣ, ಕೃಷಿ, ತೋಟಗಾರಿಕೆ ಹೆಚ್ಚಿನ ಒತ್ತು ನೀಡಬೇಕಿದೆ. ಜನರಿಗೆ ಉದ್ಯೋಗ, ರೈತರಿಗೆ ಅನುಕೂಲ ಹಾಗೂ ಅಭಿವೃದ್ಧಿ ಮಾಡುವ ನಿಟ್ಟಿನಲ್ಲಿ ಶಿಫಾರಸ್ಸು ಮಾಡಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ವಿಧಾನಪರಿಷತ್ ಸದಸ್ಯ ಡಿ.ಟಿ.ಶ್ರೀನಿವಾಸ ಮಾತನಾಡಿ, ಚಿತ್ರದುರ್ಗ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜೊತೆಗೆ ಕಾಡುಗೊಲ್ಲರ ಜನಸಂಖ್ಯೆಯೂ ಹೆಚ್ಚಿನ ಸಂಖ್ಯೆಯಲ್ಲಿದೆ. ಈಗಾಗಲೇ ಕಾಡುಗೊಲ್ಲರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ. ಸಮಿತಿ ಈ ಅಂಶಗಳನ್ನು ಗಮನದಲ್ಲಿರಿಸಿಕೊಂಡು, ಜಿಲ್ಲೆಯ ಶಿಕ್ಷಣ ಹಾಗೂ ಉದ್ಯೋಗಕ್ಕೆ ಆದ್ಯತೆ ನೀಡುವ ನಿಟ್ಟಿನಲ್ಲಿ ರಾಜ್ಯ ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕು ಎಂದರು. ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಸದಸ್ಯ ಕಾರ್ಯದರ್ಶಿ ಆಗಿರುವ ಯೋಜನಾ ಇಲಾಖೆ ಕಾರ್ಯದರ್ಶಿ ಡಾ. ಆರ್.ವಿಶಾಲ್, ಸದಸ್ಯರಾದ ಡಾ.ಎಸ್.ಟಿ.ಬಾಗಲಕೋಟೆ, ಕೆ.ಎನ್.ಸಂಗೀತ, ಯೋಜನಾ ಇಲಾಖೆ ನಿರ್ದೇಶಕ ಚಂದ್ರಶೇಖರಯ್ಯ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ, ದಾವಣಗೆರೆ ಅಪರ ಜಿಲ್ಲಾಧಿಕಾರಿ ಲೋಕೇಶ್ ಸೇರಿದಂತೆ ತುಮಕೂರು, ದಾವಣಗೆರೆ, ಶಿವಮೊಗ್ಗ, ಚಿತ್ರದುರ್ಗ ಜಿಲ್ಲೆ ವಿವಿಧ ಇಲಾಖೆ ಅಧಿಕಾರಿಗಳು, ಸರ್ಕಾರೇತರ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಪ್ಯಾನಲ್ ವಕೀಲರ ಆಯ್ಕೆಗಾಗಿ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಲ್ಲಿ ಕರ್ತವ್ಯ ನಿರ್ವಹಿಸಲು ಪ್ಯಾನಲ್ ವಕೀಲರ ಆಯ್ಕೆಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಮೇ 07 ಅರ್ಜಿ ಸಲ್ಲಿಸಲು ಕೊನೆಯ ದಿನ.

ಆಸಕ್ತರು ತಮ್ಮ ವೈಯಕ್ತಿಕ ವಿವರಗಳೊಂದಿಗೆ ಸ್ವ ಹಸ್ತಾಕ್ಷರದಿಂದ ಭರ್ತಿ ಮಾಡಿದ ಅರ್ಜಿಯನ್ನು ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಚಿತ್ರದುರ್ಗ ಅವರಿಗೆ ಸಲ್ಲಿಸಬಹುದಾಗಿರುತ್ತದೆ. ಅವಧಿ ಮುಗಿದ ನಂತರ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ಚಿತ್ರದುರ್ಗ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ಯಾನಲ್ ವಕೀಲರ ಅವಧಿಯು ಮುಕ್ತಾಯಗೊಳ್ಳುತ್ತಿದ್ದು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಹಾಗೂ ಮಾನ್ಯ ಕಾರ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ 03 ವರ್ಷಕ್ಕಿಂತ ಮೇಲ್ಪಟ್ಟು ವಕೀಲರ ವೃತ್ತಿಯಲ್ಲಿ ಅನುಭವ ಇರುವ ವಕೀಲರನ್ನು ಚಿತ್ರದುರ್ಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಲ್ಲಿ ಕಾನೂನು ನೆರವು ನೀಡುವ ಪ್ರಕರಣಗಳಲ್ಲಿ ಹಾಜರಾಗಲು ಹಾಗೂ ಫ್ರಂಟ್ ಆಫೀಸ್ (ನ್ಯಾಯಾಲಯದ ಆವರಣ), ತಹಸೀಲ್ದಾರ್ ಕಛೇರಿ, ಸಿ.ಡಿ.ಪಿ ಕಛೇರಿ, ಕಾರಾಗೃಹ, ಬಾಲ ನ್ಯಾಯಮಂಡಳಿ, ಗ್ರಾಮೀಣ ಕಾನೂನು ನೆರವು ಮತ್ತು ಸಲಹಾ ಕೇಂದ್ರ, ಎ.ಆರ್.ಟಿ ಕೇಂದ್ರಗಳಲ್ಲಿನ ಕಾನೂನು ಸಲಹಾ ಕೇಂದ್ರಗಳಿಗೆ, “ಸಖಿ” ಕೇಂದ್ರಗಳಲ್ಲಿ ಕಾನೂನು ಸಲಹೆ ನೀಡಲು ಮತ್ತು ಕಾನೂನು ಸಾಕ್ಷರತಾ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಅನುಕೂಲವಾಗುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳಲ್ಲಿ ಕಾರ್ಯ ನಿರ್ವಹಿಸಲು ಪ್ಯಾನಲ್ ವಕೀಲರುಗಳ ಆಯ್ಕೆ ಅವಶ್ಯಕವಾಗಿರುತ್ತದೆ. ಪ್ಯಾನಲ್ ವಕೀಲರ ಆಯ್ಕೆ ಪ್ರಕ್ರಿಯೆಯು THE NATIONAL LEGAL SERVICES AUTHORITY (FREE AND COMPETENT LEGAL SERVICES) REGULATIONS, 2010 (As amended vide notification F.No. L/61/10/NALSA dated 28.08.2019 published in the Gazette of India on 06.09.2019) ರ ರೆಗ್ಯೂಲೇಷನ್ 8(2) ಮತ್ತು 10 (4) ಗೆ ಒಳಪಟ್ಟಿರುತ್ತದೆ ಮತ್ತು ಮೌಖಿಕ ಸಂದರ್ಶನದ ಮುಖಾಂತರ ಪ್ಯಾನಲ್ ವಕೀಲರನ್ನು ಆಯ್ಕೆ ಮಾಡಲಾಗುವುದು.ಆದ್ದರಿಂದ ಚಿತ್ರದುರ್ಗ ಜಿಲ್ಲೆಯ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಲ್ಲಿ ಪ್ಯಾನಲ್ ವಕೀಲರಾಗಿ ಕಾರ್ಯನಿರ್ವಹಿಸಲು ಇಚ್ಚಿಸುವ ಅರ್ಹ ಅಭ್ಯರ್ಥಿಗಳು ನಿಗಧಿತ ಅರ್ಜಿ ನಮೂನೆಯಲ್ಲಿ ದಿನಾಂಕ 07/05/2025 ರಂದು ಸಂಜೆ 5.00 ಗಂಟೆಯೊಳಗಾಗಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಚಿತ್ರದುರ್ಗಲ್ಲಿ ಸಲ್ಲಿಸಲು ಕೋರಲಾಗಿದೆ. ಅಭ್ಯರ್ಥಿಗಳ ಆಯ್ಕೆ ಈ ಕೆಳಗಿನ ನಿಬಂಧನೆಗಳಿಗೆ ಒಳಗೊಂಡಂತೆ ಅರ್ಜಿಯನ್ನು ಕರೆಯಲಾಗಿದೆ.

**ನಿಬಂಧನೆಗಳು:** ವಕೀಲ ವೃತ್ತಿಯಲ್ಲಿ ಕನಿಷ್ಠ 3 ವರ್ಷಗಳ ಅನುಭವವಿರಬೇಕು. ಕರ್ನಾಟಕ ಬಾರ್ ಕೌನ್ಸಿಲ್ ನಿಂದ ನೊಂದಾವಣಿ ಆಗಿರಬೇಕು ಹಾಗೂ ಅದರ ಪ್ರಮಾಣಪತ್ರವನ್ನು ಲಗತ್ತಿಸಬೇಕು. ಕಾನೂನು ಸೇವೆಗಳ ಪ್ರಾಧಿಕಾರದ ನಿಯಮಗಳನ್ನು ತಿಳಿದಿರಬೇಕು. ವಕೀಲರುಗಳಿಗೆ ಪ್ರತ್ಯೇಕವಾದ ವಾಹನ ಭತ್ಯೆ ನೀಡಲಾಗುವುದಿಲ್ಲ. ಬೈಠಕ್ ಭತ್ಯೆ ಮಾತ್ರ ನೀಡಲಾಗುತ್ತದೆ. ವಕೀಲರ ಸಾಮರ್ಥ್ಯ, ಸಮಗ್ರತೆ, ಸೂಕ್ತತೆ ಮತ್ತು ಅನುಭವಗಳನ್ನು ಪರಿಗಣಿಸಲಾಗುತ್ತದೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ತಿಳಿಸಿದ್ದಾರೆ.

### ಬಿವಿಎ ಪದವಿ ಪ್ರವೇಶಾತಿಗೆ ಅರ್ಜಿ

■ **ಚಿತ್ರದುರ್ಗ**

ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜನೆಗೊಂಡಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ), ಸಿದ್ದಾರ್ಥನಗರ,ಮೈಸೂರುಸಂಸ್ಥೆಯಲ್ಲಿಬ್ಯಾಚುಲರ್ ಆಫ್ ವಿಜುಯಲ್ ಆರ್ಟ್ಸ್ (ಬಿ.ವಿ.ಎ) (ನಾಲ್ಕು ವರ್ಷದ ಎಂಟು ಸೆಮಿಸ್ಟರ್ ಎನ್.ಇ.ಪಿ. ಪದ್ಧತಿ] ದೃಶ್ಯಕಲೆಯಲ್ಲಿ 2025–26ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಬಿ.ವಿ.ಎ ಪದವಿ ಪ್ರವೇಶಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ಪದವಿಯಲ್ಲಿ 3ನೇ ಸೆಮಿಸ್ಟ[illegible]ನಿಂದ ಚಿತ್ರಕಲೆ, ಶಿಲ್ಪಕಲೆ, ಗ್ರಾಫಿಕ್ಸ್ ಕಲೆ (ಅಷ್ಟುಕಲೆ), ಅನ್ವಯಕಲೆ, ಕಲಾ ಇತಿಹಾಸ ಹಾಗೂ ಛಾಯಾಚಿತ್ರ ಮತ್ತು ಛಾಯಚಿತ್ರ ಪತ್ರಿಕೋದ್ಯಮ ವಿಭಾಗಳಲ್ಲಿ ವಿಶೇಷ ಅಧ್ಯಯನದ ಸ್ನಾತಕ ಪದವಿಯಾಗಿರುತ್ತದೆ. ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸರ್ಕಾರದ ಅಂತರ್ಜಾಲ ವಿಳಾಸ htts://uucms.karnataka.gov.in ಅಥವಾ https://www.cavamysore karnataka.gov.in ಅಂತರ್ಜಾಲದ ಮೂಲಕವೇ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಪ್ರವೇಶಾತಿಗಾಗಿ ಅರ್ಹತಾ ಪರೀಕ್ಷೆಯ ದಿನಾಂಕ ಮತ್ತು ಇತರೆ ಮಾಹಿತಿಯನ್ನು ಪ್ರತ್ಯೇಕವಾಗಿ ತಿಳಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ 0821–2438931 ಯನ್ನು ಸಂಪರ್ಕಿಸಬಹುದು.

### ಬಹಿರಂಗ ಹರಾಜು

» **ಚಿಕ್ಕಮಗಳೂರು**

ನಗರದ ಡಿ.ಎ.ಸಿ.ಜಿ. ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿರುವ ಹಳೆಯ ಹಾಗೂ ಅನುಪಯೋಗಿ ವಸ್ತುಗಳನ್ನು ಮೇ 23 ರಂದು ಬೆಳಿಗ್ಗೆ 11 ಗಂಟೆಗೆ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲು ತೀರ್ಮಾನಿಸಲಾಗಿದೆ.

# ಹಾಸ್ಟೆಲ್, ಅಂಗನವಾಡಿಗಳಿಗೆ ಸ್ವಸಹಾಯ ಗುಂಪುಗಳಿಂದ ಆಹಾರ ಪೂರೈಕೆ: ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್

» **ದಾವಣಗೆರೆ**

ಜಿಲ್ಲೆಯಲ್ಲಿರುವ ಹಾಸ್ಟೆಲ್ ಹಾಗೂ ಅಂಗನವಾಡಿ ಕೇಂದ್ರಗಳಿಗೆ ಬೇಕಾಗುವ ಆಹಾರ ಪದಾರ್ಥಗಳನ್ನು ಸ್ವಸಹಾಯ ಸಂಘಗಳಿಂದ ಪಡೆದುಕೊಳ್ಳಬೇಕೆಂದು ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

ಸೋಮವಾರ(ಏ.28) ರಂದು ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ವತಿಯಿಂದ ಕಡ್ಲೇಬಾಳು ಗ್ರಾಮದ ಶ್ರೀಆಂಜನೇಯಸ್ವಾಮಿ ದೇವಸ್ಥಾನದ ಆವರಣದಲ್ಲಿ ಆಯೋಜಿಸಲಾಗಿದ್ದ ಹೊಂಬೆಳಕು ಸಂಜೀವಿನಿ ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟದ ವಾರ್ಷಿಕ ಸಾಮಾನ್ಯ ಸಮಿತಿಯ ಮಹಾಸಭೆ ಮತ್ತು ಸರ್ಕಾರಿ ಯೋಜನೆಗಳ ಕುರಿತು ಮಹಿಳೆಯರೊಂದಿಗೆ ಸಂವಾದ ಹಾಗೂ ಕುಂದುಕೊರತೆಗಳಪರಿಶೀಲನಾಸಭೆಯನ್ನು ಉದ್ಘಾಟಿಸಿ ಮಾತಾನಾಡಿದರು.

ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿರ ಪಾತ್ರ ತುಂಬಾ ಇರುತ್ತದೆ. ಗರ್ಭಿಣಿ ಮಹಿಳೆಯರಿಗೆ ತಾಯಿ ಸ್ಥಾನವನ್ನು ನೀವು ತುಂಬುತ್ತಿರಿ, ಅವರಿಗೆ ಸಮಯಕ್ಕೆಸರಿಯಾಗಿ ಚಿಕಿತ್ಸೆಕೊಡಿಸಬೇಕು. ಸರಿಯಾದ ಸಮಯದಲ್ಲಿ ಅವರಿಗೆ ಆಸ್ಪತ್ರೆಗೆ ದಾಖಲಿಸುವ ವ್ಯವಸ್ಥೆಯನ್ನು ಮಾಡಿ ಸಾವಿನ ಪ್ರಮಾಣವನ್ನು ಕಡಿಮೆ ಮಾಡಬೇಕು. ಸ್ವ ಸಹಾಯ ಸಂಘಗಳು



ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಬೆಳೆಯಬೇಕು. ಇದರಿಂದ ಆರ್ಥಿಕ ಸಬಲತೆಯಿಂದ ಶೋಷಣೆಯನ್ನು ಸಮರ್ಥವಾಗಿ ಎದುರಿಸಲು ಸಾಧ್ಯ ಎಂದರು. ಕಡ್ಲೇಬಾಳು ಜನರು ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಸರ್ಕಾರದ ಸೌಲಭ್ಯವನ್ನು ಪಡೆಯಬೇಕು ಎಂದರು. ರಸ್ತೆ, ದೀಪ, ನೈರ್ಮಲ್ಯ, ನೀರಿನ ವ್ಯವಸ್ಥೆ ಮುಂತಾದವುಗಳ ಸ್ಥಾಪನೆ, ನಿರ್ವಹಣೆಗಳು ಕಡ್ಡಾಯವಾದ ಕರ್ತವ್ಯಗಳು. ಆದಾಯ ಹೆಚ್ಚಿಸುವಂಥ ಕೆರೆ ಬಾವಿಗಳ ನಿರ್ಮಾಣ, ಅರಣ್ಯ ಬೆಳವಣಿಗೆ ಮೊದಲಾದ ಕಾರ್ಯಕ್ರಮಗಳನ್ನೂ ಶಿಕ್ಷಣ, ವಸತಿ, ವಾಚನಾಲಯ, ಕ್ರೀಡಾಂಗಣ, ತೋಟಗಳು ಮುಂತಾದ ಸೌಕರ್ಯಗಳನ್ನು ಒದಗಿಸುವಂಥ ಯೋಜನೆಗಳನ್ನೂ ಪಂಚಾಯತಿಗಳು ಕೈಗೊಳ್ಳಬಹುದು.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಡಾ.ಸುರೇಶ್.ಬಿ.ಇಟ್ನಾಳ್ ಮಾತಾನಾಡಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಇದರ ಉದ್ದೇಶ ಬಡತನ ನಿರ್ಮೂನೆ ಮಾಡವಂತದ್ದು, ಗ್ರಾಮೀಣ ಪ್ರದೇಶದಲ್ಲಿರುವ ಮಹಿಳೆಯರ ಜೀವನವನ್ನು ಸುಧಾರಿಸಬೇಕು. ಅವರಿಗೆ ಶಿಕ್ಷಣ, ಆರ್ಥಿಕ ಸೌಲಭ್ಯವನ್ನು ಹೆಚ್ಚಿನ ಪ್ರಮಾಣದಲ್ಲಿ ನೀಡಬೇಕು. ಸ್ತ್ರೀ ಶಕ್ತಿ ಯೋಜನೆಯ ಸ್ಥಾಪನೆಯಾಗಿ 10 ವರ್ಷವಾಯಿತು. ಕಡ್ಲೆಬಾಳು ಗ್ರಾಮ ಪಂಚಾಯಿತಿಯಲ್ಲಿ 80 ಸ್ವ ಸಹಾಯ ಸಂಘ, 802 ಅಭ್ಯರ್ಥಿಗಳು ಜಿಎಫ್‌ಎಲ್ ಸೇರಿಕೊಂಡಿದ್ದಾರೆ. ನಮ್ಮ ಜಿಲ್ಲೆಯಲ್ಲಿ 3.80 ಲಕ್ಷ ಮಹಿಳೆಯರು ಗೃಹ ಲಕ್ಷ್ಮೀ ಯೋಜನೆಯ ಲಾಭ ಪಡೆಯುತ್ತಿದ್ದಾರೆ. 2 ಲಕ್ಷ ಜನ ಎನ್ ಆರ್ ಎಲ್ ಎಂ ವ್ಯಾಪ್ತಿ ಬಿಟ್ಟು ಹೊರಗಡೆ ಇದ್ದಾರೆ. ಅವರು ಕೂಡ ಈ ವ್ಯಾಪ್ತಿಗೆ ಅದಷ್ಟು ತರಬೇಕು ಎಂದರು. 66 ಸ್ವಸಹಾಯ ಸಂಘಗಳಿಗೆ ಸುಮಾರು 36 ಲಕ್ಷ ಹಣವನ್ನು ನೀಡಿದ್ದೇವೆ. ಕಡ್ಲೇಬಾಳು ಸ್ವ–ಸಹಾಯ ಸಂಘದವರು ಇನ್ನೂ ಹೆಚ್ಚಿನ ಪ್ರಮಾಣದ ಉತ್ಪಾದನೆಯನ್ನು ಕೈಗೊಳ್ಳಬೇಕು ಎಂದರು.

ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷರಾದ ಪರಶುರಾಮ ಪ್ರಾಸ್ತಾವಿಕವಾಗಿ ಮಾತನಾಡಿದರು.

ಎಲ್ಲಾ ಇಲಾಖೆಯವರು ಪ್ರಗತಿ ವರದಿಯನ್ನು ನೀಡಿದರು. ಗರ್ಭಿಣಿ ಮಹಿಳೆಯರಿಗೆ ಶ್ರೀಮಂತ ಕಾರ್ಯವನ್ನು ನೆರವೇರಿಸಿದರು. ತೋಟಗಾರಿಕೆ ಇಲಾಖೆಯ ವತಿಯಿಂದ ಹಣ್ಣು ಮತ್ತು ತರಕಾರಿ ಬೀಜಗಳನ್ನು ವಿತರಣೆ ಮಾಡಲಾಯಿತು. ಹಾಗೂ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಡ್ಲೆಬಾಳು ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಭರಮಕ್ಕ ಪರಸಪ್ಪನವರು ವಹಿಸಿದ್ದರು.

ತಹಶೀಲ್ದಾರ್ ಅಶ್ವಥ್, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರಾಮಭೋವಿ, ದಾವಣಗೆರೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ನ ನಿರ್ದೇಶಕ ಮುದೇಗೌಡ್ರ ಗಿರೀಶ್,ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಶ್ರೀಧರಮೂರ್ತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿ ಅಭಿಕುಮಾರ್.ಜಿ.ಎಸ್, ಗ್ರಾ.ಪಂ ಉಪಾಧ್ಯಕ್ಷರಾದ ಪ್ರಭಾಕರ್ ಕಡ್ಲೇಬಾಳು, ಹೊಂಬೆಳಕು ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟದ ಪದಾಧಿಕಾರಿ ಮಂಜುಳ ಬಿ.ಎಂ ಉಪಸ್ಥಿತರಿದ್ದರು.

# ಮುರುಘಾ ಮಠದಲ್ಲಿ ಬಸವೇಶ್ವರ ಜಯಂತಿಗೆ ಚಾಲನೆ



» **ಚಿತ್ರದುರ್ಗ**

ನಗರದ ಮುರುಘರಾಜೇಂದ್ರ ಬೃಹನ್ಮಠದಲ್ಲಿ ವಿಶ್ವಗುರುಶ್ರೀಬಸವೇಶ್ವರಜಯಂತಿಯನ್ನುಮೂರು ದಿನಗಳ ಕಾಲ ವೈಭವದಿಂದ ಆಚರಿಸಲಾಗುತ್ತಿದೆ. ಸೋಮವಾರ ಸಾರ್ವಜನಿಕರಿಗೆ ವಿವಿಧ ಸ್ಪರ್ಧೆ ನಡೆದವು.ಎಸ್‌ಜೆಎಂ ವಿದ್ಯಾಪೀಠದ ಆಡಳಿತ ಮಂಡಳಿ ಸದಸ್ಯ ಡಾ.ಬಸವಕುಮಾರ ಸ್ವಾಮೀಜಿ ಮಾತನಾಡಿ, ಜಯಂತಿಗಳು ಅರ್ಥಪೂರ್ಣವಾಗಿರಬೇಕು. ಮಹಾತ್ಮರ ಆದರ್ಶಗಳು ಅನುಕರಣೀಯವಾಗಿರಬೇಕು. ನಮ್ಮ ಮಕ್ಕಳಿಗೆ ಸಿನಿಮಾ ನಟನಟಿಯರೇ ಆದರ್ಶವಾಗಬಾರದು ಎಂದರು.

ಸತ್ಯ, ತ್ಯಾಗ, ಕರುಣೆ, ಅಹಿಂಸೆಗಳನ್ನು ಬದುಕಿನ ಉಸಿರಾಗಿಸಿಕೊಂಡ ಶಿವಶರಣರ ನಡೆ ಆದರ್ಶಪ್ರಾಯವಾಗಬೇಕು. ಅಂತಹ ಮಹಾ ಶರಣರ, ಮಹಾ ಪುರುಷರ ಆದರ್ಶಗಳನ್ನು ನೆನಪಿಸುವ ನಿಟ್ಟಿನಲ್ಲಿ ಅವರನ್ನು ಆದರ್ಶವಾಗಿಟ್ಟುಕೊಳ್ಳುವುದಕ್ಕೆ ಶ್ರೀಮಠದಲ್ಲಿ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ ಎಂದು ನುಡಿದರು.ಬಸವಲಿಂಗದೇವರು ಮಾತನಾಡಿ, ಬಸವ ಜಯಂತಿ ಅಂಗವಾಗಿ ಶ್ರೀ ಮಠದಲ್ಲಿ ವಿವಿಧ ಸ್ಪರ್ಧೆಗಳನ್ನು ಆಯೋಜಿಸಿದ್ದು ಶ್ರೀ ಬಸವಣ್ಣನವರ ಜಯಂತಿಗೆ ಒಂದು ಬಣ್ಣ ಬಂದಿದೆ. ಇಂದು ವಿಶ್ವದಾದ್ಯಂತ ಬಸವ ಜಯಂತಿಯನ್ನು ಆಚರಿಸಲಾಗುತ್ತದೆ. ಕರ್ನಾಟಕ ಸರ್ಕಾರವು ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದೆ. ಪ್ರಥಮ ಬಸವ ಜಯಂತಿಯನ್ನು ಆಚರಿಸಿದ ಕೀರ್ತಿ ಶ್ರೀಮುರುಘಾಮಠದ ಶಾಖಾ ಮಠವಾದ ದಾವಣಗೆರೆಯ ಶ್ರೀ ವಿರಕ್ತ ಮಠಕ್ಕೆ ಸಲ್ಲುವಂತದ್ದಾಗಿದೆ ಎಂದು ತಿಳಿಸಿದರು.

ವಚನ ಕಂಠಪಾಠ ಸ್ಪರ್ಧೆಯಲ್ಲಿ ಸುಮಾರು 85 ಸ್ಪರ್ಧಿಗಳು, 12 ನೇಯ ಶತಮಾನದ ಬಸವಾದಿ ಶಿವಶರಣರ ವೇಷಭೂಷಣ ಸ್ಪರ್ಧೆಯಲ್ಲಿ ಸುಮಾರು 42 ಸ್ಪರ್ಧಿಗಳು, ಹಾಗು ರಂಗೋಲಿ ಸ್ಪರ್ಧೆಯಲ್ಲಿ ಸುಮಾರು 45 ಸ್ಪರ್ಧಿಗಳು ಭಾಗವಹಿಸಿದ್ದರು.

# ಮಳೆ ಗಾಳಿಗೆ ಅಡಿಕೆ, ಪಪ್ಪಾಯಿ, ಮೆಕ್ಕೆಜೋಳ ಬೆಳೆಗಳು ನೆಲಕಚ್ಚಿ ಲಕ್ಷಾಂತರ ರೂಪಾಯಿ ನಷ್ಟ



**ಚಳ್ಳಕೆರೆ:** ತಾಲ್ಲೂಕಿನಾದ್ಯಂತ ಭಾನುವಾರ ತಡರಾತ್ರಿ ಬಿಸಿದ ಗಾಳಿಗೆ ಗ್ರಾಮೀಣ ಭಾಗದ ಅನೇಕ ತೋಟಗಳಲ್ಲಿರುವ ಅಡಿಗೆ, ತೆಂಗು, ಬಾಳೆ, ಪಪ್ಪಾಯಿ, ಮೆಕ್ಕೆಜೋಳ ಮುಂತಾದ ಬೆಳೆಗಳು ಗಾಳಿಯ ರಭಸಕ್ಕೆ ನೆಲಕ್ಕೊರಗಿವೆ. ರೈತರು ಲಕ್ಷಾಂತರ ರೂಪಾಯಿ ನಷ್ಟವನ್ನು ಅನುಭವಿಸಿದ್ದಾರೆ. ಕೈಗೆ ಬಂದ ಫಸಲು ನೆಲದ ಪಾಲಾಗಿದ್ದು ರೈತರನ್ನು ಚಿಂತೆಗೀಡುಮಾಡಿದೆ. ತಾಲ್ಲೂಕಿನ ದೊಡ್ಡಚೆಲ್ಲೂರು ಗ್ರಾಮದ ಹನುಮಂತರಾಯ ಎಂಬುವವರ ರಿ.ಸರ್ವೆ, ನಂ. 2/2ರಲ್ಲಿ 2.20 ಎಕರೆ ಪ್ರದೇಶದಲ್ಲಿದ್ದ ಅಡಿಕೆ ಮೆರಗಳು ಮುರಿದು ಬಿದ್ದು 80 ಸಾವಿರ ನಷ್ಟವಾಗಿದೆ. ಅದೇ ಗ್ರಾಮದ ಜಗದೀಶ್ ಎಂಬುವವರ 22/6 ನಾಲ್ಕು ಎಕರೆ ಪ್ರದೇಶದ ಪಪ್ಪಾಯಿ ಬೆಳೆ ನೆಲಕ್ಕುರುಳಿ 50 ಸಾವಿರ, ಬಿ.ಎಲ್. ಮಲ್ಲಿಕಾರ್ಜುನ್ ಎಂಬುವವರ ರಿ.ಸರ್ವೆ,ನಂ 128/4ರ ಒಂದು ಎಕರೆ ಪ್ರದೇಶದ ಅಡಿಕೆ ನೆಲಕ್ಕೆ ಬಿದ್ದು 50 ಸಾವಿರ, ಚಿಕ್ಕಬಾದಿಹಳ್ಳಿ ಗ್ರಾಮದ ಗಿರಿಯಪ್ಪ ಎಂಬುವವರ ರಿ.ವರ್ಸೆ, ನಂ 181ರ ಎರಡು ಎಕರೆ ಪ್ರದೇಶದಲ್ಲಿದ್ದ ಅಡಿಗೆ ಬೆಳೆ ನೆಲಕ್ಕೆ ಬಿದ್ದು 30ಸಾವಿರ ನಷ್ಟವಾಗಿದೆ. ತಾಲ್ಲೂಕಿನ ಟಿ.ಎನ್.ಕೋಟೆಯ ಜಿ.ಮಲ್ಲಿಕಾರ್ಜನಪ್ಪನವರ ಜಮೀನಿನಲ್ಲಿದ್ದ ಅಡಿಕೆ, ಮೆಕ್ಕೆಜೋಳ ಗಾಳಿಗೆ ನೆಲಕಚ್ಚಿ ಲಕ್ಷಾಂತರ ರೂಪಾಯಿನಷ್ಟ ಸಂಭವಿಸಿದೆ.

## ಪ್ರಮುಖ ಸುದ್ದಿ

# ಕುಮಾರಿ ಚಂದನ, ಚಿನ್ಮಯ ಭಾರತನಾಟ್ಯ ರಂಗಪ್ರವೇಶ

» **ಚಿತ್ರದುರ್ಗ**

ಆಹ್ಲಾದಕಾರಿ ನ್ರತ್ಯಗಳ ಝೇಂಕಾರ ,ಪ್ರಬುದ್ಧ ಅಭಿನಯದ ಮೂಲಕ ಶೋಭಿಸಿದ ರಂಗಪ್ರವೇಶ ಭಾನುವಾರ ನಗರದ ಜಿ.ಜಿ ಸಮುದಾಯ ಭವನದಲ್ಲಿ ಯಶಸ್ವಿಯಾಗಿ ಜರುಗಿತು.ಚಿತ್ರದುರ್ಗ ಪ್ರತಿಷ್ಠಿತ ನಾಟ್ಯ ಕಲಾ ಕೇಂದ್ರ ಲಾಸಿಕಾ ಫೌಂಡೇಷನ್ನಿನ ನ್ರತ್ಯ ಗುರು ಶ್ರೀಮತಿ ಶ್ವೇತಾ ಮಂಜುನಾಥ್ ರವರ ಶಿಸ್ತು ಬದ್ಧ ತರಬೇತಿಯಿಂದ ಉತ್ತಮ ಕಲಾವಿದೆಯಾಗಿ ರೂಪುಗೊಂಡ ಕಲಾಪ್ರತಿಭೆ ಕುಮಾರಿ ಚಂದನ ಕೆ ಪಿ ಹಾಗೂ ಚಿನ್ಮಯಿ ಕೆ ಪಿ ,ಗುರುವಿಗೆ ತಕ್ಕ ಶಿಷ್ಯೆಯಾಗಿ ತಮ್ಮ ಅಪೂರ್ವ ನ್ರತ್ಯ ಕಲೆಯನ್ನು ಸಾಬೀತುಪಡಿಸಿದರು

ನಟುವಾಂಗದ ಮೂಲಕ ಇಡೀ ಕಾರ್ಯಕ್ರಮದ ಸೂತ್ರದಾರಿಯಾಗಿ ಭರತನಾಟ್ಯ ಗುರು ಶ್ರೀಮತಿ ಶ್ವೇತಾ ಮಂಜುನಾಥ್ ಎಲ್ಲರ ಗಮನ ಸೆಳೆದು ತಾನೊಬ್ಬ ಸಮರ್ಥ ನೃತ್ಯ ಗುರು ಎಂಬುದನ್ನು ಮತ್ತೊಮ್ಮೆ ನಿರೂಪಿಸಿದರೆ , ಗಾಯನದಲ್ಲಿ ನಮ್ಮ ನಾಡಿನ ಭರವಸೆಯ ಉದಯೋನ್ಮುಖ ಕಲಾವಿದರಾದ ವಿದ್ವಾನ್ ಶ್ರೀ ರೋಹಿತ್ ಭಟ್ ಬೆಂಗಳೂರು , ಮೃದಂಗದಲ್ಲಿ ಬಹುಮುಖ ಪ್ರತಿಭೆ ವಿದ್ವಾನ್ ಶ್ರೀ ನಾಗೇಂದ್ರ ಪ್ರಸಾದ್ ಬೆಂಗಳೂರು, ಕೊಳಲು ವಾದನದಲ್ಲಿ ಯುವ ಕಲಾವಿದರಾದ ವಿದ್ವಾನ್ ಶಶಾಂಕ್ ಜೋಡೀದಾರ್ ಬೆಂಗಳೂರು , ರಿಧಮ್ ಪಾಡ್ ನಲ್ಲಿ ಸಾಯಿ ವಂಶಿ ಬೆಂಗಳೂರು, ಅಪಾರ ಅನುಭವಿಗಳು ಆದ ವಿದ್ವಾನ್ ಗೋಪಾಲ್ ವೆಂಕಟ್ರಮಣ ಇವರು ವೀಣಾ ವಾದನದಲ್ಲಿ ಎಲ್ಲ ಪೇಕ್ಷಕರ ಮನಗೆದ್ದರು .



ಆರಂಭದಲ್ಲಿ ಹಿಮ್ಮೇಳ ಕಲಾವಿದರಿಂದ ವಿನಾಯಕನ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮ ಪ್ರಾರಂಭವಾಗಿ ವೇದಿಕೆಗೆ ನಯ – ನಾಜೂಕಿನ ಹೆಜ್ಜೆಗಳಲ್ಲಿ ಬಳಕುತ್ತ ಪ್ರವೇಶಿಸಿದ ಕಲಾವಿದೆಯರು ಮೊದಲಿಗೆ ನ್ರತ್ಯದ ಅಧಿದೇವತೆ ನಟರಾಜನಿಗೆ ಪೂಜೆಯನ್ನು ಸಲ್ಲಿಸಿ ,ಶ್ರೀಮತಿ ಶ್ವೇತ ಮಂಜುನಾಥರವರು ತಮ್ಮ ನೃತ್ಯ ಕಲಿಕೆಯ ಗುರುಗಳಾದ ಹಾಗು ನ್ರತ್ಯ ಕಲಿಕೆಯಲ್ಲಿ ತಮ್ಮ ಬೆನ್ನೆಲುಬಾಗಿ ನಿಂತಿರುವಂತಹ ನಾಟ್ಯ ಸರಸ್ವತಿ ಬಿರುದಾಂಕಿತೆ , ಕರ್ನಾಟಕ ಸಂಗೀತ ಮತ್ತು ನೃತ್ಯ ಅಕಾಡೆಮಿಯ ಅಧ್ಯಕ್ಷರು ಆದ ಶ್ರೀಮತಿ ಶುಭ ಧನಂಜಯ ರವರಿಗೆ ವಂದನೆಗಳನ್ನು ಸಲ್ಲಿಸಿ ,ತನ್ನ ಶಿಷ್ಯೆ ಯಶಸ್ವಿನಿಗೆ ಗೆಜ್ಜೆ ತೊಡಿಸುವುದರ ಮೂಲಕ ಭರತನಾಟ್ಯ ರಂಗಪ್ರವೇಶ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು .

ಪುಷ್ಪಾಂಜಲಿಯೊಂದಿಗೆ ವಿನಮ್ರ ಬಾವದಿಂದ ತನ್ನ ರಂಗಪ್ರವೇಶದ ಯಶಸ್ಸಿಗೆ ಸಹಕರಿಸುತ್ತಿರುವ ಎಲ್ಲರಿಗು ಅಭಿವಂದನೆ ಸಲ್ಲಿಸಿ . ಬಹಳ ಮುಖ್ಯವಾಗಿ ನರ್ತಿಸಲು ವೇದಿಕೆಯ ರೂಪದಲ್ಲಿ ಅವಕಾಶ ನೀಡಿರುವ ಭೂ ಮಾತೆಗೆ ಪ್ರಣಾಮ ಸಲ್ಲಿಸಿ , ಸಂಗೀತ ಕಲಾವಿದರಿಗೆ ,ಸಭಿಕರಿಗೆ ,ತನ್ನ ಅಸ್ತಿತ್ವಕ್ಕೆ ಕಾರಣರಾದ ತಂದೆ ತಾಯಿಗೆ , ಗುರಪರಂಪರೆಗೆ , ಬಂಧುಬಳಗದವರಿಗೆ ತನ್ನ ಮನೋಹರ ನ್ರತ್ಯದ ಮೂಲಕ ವಿನಮ್ರ ನಮನಗಳನ್ನು ಸಲ್ಲಿಸಿದರು .ಅದೇ ರೀತಿ ವಿಘ್ನ ವಿನಾಶಕ ಗಣಪತಿಗೂ ವಂದನೆ ಸಲ್ಲಿಸಲಾಯಿತು. ನಂತರದಲ್ಲಿ ಗಣಪತಿ ಸ್ತುತಿ , ಅರ್ಧನಾರೀಶ್ವರ ,ಭರತನಾಟ್ಯದ ಕೇಂದ್ರ ಭಾಗವಾಗಿರುವ ವರ್ಣ ನ್ರತ್ಯ ಸುಮನೋಹರವಾಗಿ ಕಣ್ಮುಂದೆ ತಂದಳು ,ಬೆಡಗು ತುಂಬಿದ ನ್ರತ್ತಗಳಲ್ಲೇ ಆಕರ್ಷಕ ಭಂಗಿಗಳನ್ನು ಕೊಟ್ಟಿದ್ದು ವಿಶೇಷ . ಹನುಮಾನ್ ಚಾಲೀಸ್ ಮತ್ತು ಜಾವಳಿ ನ್ರತ್ಯಗಳು ಕಲಾ ವಿದ್ವಾಂಸರ ಮತ್ತು ಕಲಾರಸಿಕರ ಪ್ರಶಂಸೆಗೆ ಪಾತ್ರವಾದವು .ಕೊನೆಯದಾಗಿ ತಿಲ್ಲಾನ ಮತ್ತು ಮಂಗಳದೊಂದಿಗೆ ಭರತನಾಟ್ಯ ರಂಗಪ್ರವೇಶವನ್ನು ಸುಮಾರು ಮೂರು ಘಂಟೆಗಳ ಕಾಲ ಏಕವ್ಯಕ್ತಿ ಪ್ರದರ್ಶನ ನೀಡುವುದರ ಮೂಲಕ ಯಶಸ್ವಿಯಾಗಿ ತಮ್ಮ ನ್ರತ್ಯ ಪ್ರದರ್ಶನವನ್ನು ಸಂಪನ್ನಗೊಳಿಸಿದರು.

ಸಭಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಕರ್ನಾಟಕ ಸಂಗೀತ ಮತ್ತು ನೃತ್ಯ ಅಕಾಡೆಮಿ ಅಧ್ಯಕ್ಷರಾದ ಶ್ರೀಮತಿ ಶುಭ ಧನಂಜಯ ಮಾತನಾಡಿ ಚಿತ್ರದುರ್ಗದಲ್ಲಿ ಇಂತಹ ಕಾರ್ಯಕ್ರಮವನ್ನು ಆಯೋಜಸಿರುವ ಕುರಿತು ಹೆಮ್ಮೆ ವ್ಯಕ್ತಪಡಿಸಿದರು , ನಮ್ಮ ಸಂಸ್ಕೃತಿ, ಪರಂಪರೆ ಮುಂದುವರೆಯಬೇಕಾದರೆ ಇಂತಹ ರಂಗಪ್ರವೇಶದ ಮೂಲಕ ಹೊಸ ಹೊಸ ಪ್ರತಿಭಾನ್ವಿತ ಕಲಾವಿದರು ಭರತನಾಟ್ಯ ಕಲಿಯಲು ಮುಂದಾಗಬೇಕು ಎಂದು ತಿಳಿಸಿದರು

, ಶ್ರೀಯುತ ರೇವಣಸಿದ್ದಪ್ಪ ರಾಮಾಂಜನೇಯ, ಲಾಸಿಕ ಫೌಂಡೇಶನ್ ಅಧ್ಯಕ್ಷರಾದ ಶ್ರೀ ರತ್ನಾಕರ ಭಟ್ ರವರು ಕಲಾವಿದರ ಭವಿಷ್ಯಕ್ಕೆ ಶುಭ ಕೋರಿದರು. ಲಾಸಿಕಾ ಫೌಂಡೇಶನ್ ನ್ನಿನ ಮಂಜುನಾಥ್ ಭಾಗವತ್ ನಿರ್ವಹಣೆ ಮಾಡಿದರು .

## ಫಾಸ್ಟ್ ನ್ಯೂಸ್

### ಅಂಬೇಡ್ಕರ್ ಸಂವಿಧಾನ ದೇಶದ ಪ್ರಗತಿಗೆ ರಹದಾರಿ



» **ಚಳ್ಳಕೆರೆ**

ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರಚಿಸಿದ ಸಂವಿಧಾನ ದೇಶದ ಸುಲಲಿತ ಆಡಳಿತಕ್ಕೆ ನಾಂದಿಯಾಗಿದೆ. ಅಭಿವೃದ್ದಿಪರ ಚಿಂತನೆಗಳಿಗೆ ವಿವಿಧ ಕಾರ್ಯಯೋಜನೆಗಳ ರೂಪುರೇಷೆಗಳನ್ನು ಸಿದ್ದಪಡಿಸಲು ಅಂಬೇಡ್ಕರ್ ಸಂವಿಧಾನ ನಮಗೆ ಪ್ರೇರಣೆಯಾಗಿದೆ. ವಿಶೇಷ ಜ್ಞಾನವನ್ನು ಹೊಂದಿದ್ದ ಅಂಬೇಡ್ಕರ್ ಶೋಷಿತ ಸಮುದಾಯವೂ ಸೇರಿದಂತೆ ಅಲಕ್ಷಿತಕ್ಕೆ ಒಳವಾದ ಎಲ್ಲಾ ಸಮುದಾಯಗಳ ಪರವಾಗಿ ಹೋರಾಟ ನಡೆಸಿದ ಮಹಾನೀಯರು ಎಂದು ತಳಕು–ನಾಯಕನಹಟ್ಟಿ ಬಿಜೆಪಿ ಮಂಡಲಾಧ್ಯಕ್ಷ ಚನ್ನಗಾನಹಳ್ಳಿಮಲ್ಲೇಶ್ ತಿಳಿಸಿದರು. ಅವರು, ತಾಲ್ಲೂಕಿನ ತಿಪ್ಪಾರೆಡ್ಡಿಹಳ್ಳಿ ಗ್ರಾಮದಲ್ಲಿ ಜೈ ಭೀಮಾ ರಾಷ್ಟ್ರೀಯ ಪ್ರಜಾಪ್ರಭುತ್ವ ಸೇನೆ ಹಮ್ಮಿಕೊಂಡಿದ್ದ ಅಂಬೇಡ್ಕರ್‌ರವರ 134ನೇ ಮತ್ತು ಬಾಬುಜಗಜೀವನರಾಮ್ 118ನೇ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಸಮಾಜದಲ್ಲಿ ಆಳಾವಾಗಿ ಬೇರೂರಿದ್ದ ಜಾತೀಯತೆಯ ವಿಷಭಾವನೆಯನ್ನು ದೂರ ಮಾಡುವಲ್ಲಿ ಅಂಬೇಡ್ಕರ್ ಮತ್ತು ಜಗಜೀನರಾಮ್ ಕೊಡುಗೆ ಅಪಾರವಾಗಿದೆ ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಚಿದಾನಂದ, ತಾಲ್ಲೂಕು ಲ್ಯಾಬ್ ನೋಡಲ್ ಅಧಿಕಾರಿ ಎಚ್.ತಿಪ್ಪೇಸ್ವಾಮಿ, ಹೊನ್ನೂರುಮಾರಣ್ಣ, ಸಿದ್ದಾರ್ಥ, ಮಧು, ನಿಂಗಣ್ಣ, ವೀರಣ್ಣ, ಸುರೇಶ್, ಮಚ್ಚಪ್ಪ ಮುಂತಾದವರು ಉಪಸ್ಥಿತರಿದ್ದರು.

### ಬಸವ ಜಯಂತಿ ಹಿನ್ನೆಲೆ: ರೋಗಿಗಳಿಗೆ ಬ್ರೆಡ್, ಹಣ್ಣು ವಿತರಣೆ



» **ಚಳ್ಳಕೆರೆ**

ಸಮಾಜದಲ್ಲಿ ಸಮಾನತೆಯ ಜಾಗೃತಿ ಮೂಡಿಸಿದ ಜಗಜ್ಯೋತಿ ಬಸವೇಶ್ವರರ ಜಯಂತಿ ಕಾರ್ಯಕ್ರಮ ಅರ್ಥಗರ್ಭಿತವಾಗಿ ನಡೆಸಲು ವೀರಶೈವ ಸಮಾಜ ಸೇವಾ ಸಂಘಗಳು ಕಾರ್ಯಪ್ರವೃತ್ತವಾಗಿವೆ. ವಿಶೇಷವಾಗಿ ಬಸವ ಜಯಂತಿ ಅಂಗವಾಗಿ ಆಸ್ಪತ್ರೆಯ ಬಡ ರೋಗಿಗಳಿಗೆ ಹಣ್ಣು, ಬ್ರೆಡ್ ಹಂಚುವ ಮೂಲಕ ಕಾರ್ಯಕ್ರಮವನ್ನು ವೀರಶೈವ ಸಮಾಜದ ಆಚರಣೆ ಮಾಡುತ್ತಿದೆ ಎಂದು ಅಖಿಲಭಾರತ ವೀರಶೈವ ಮಹಾಸಭಾ ತಾಲ್ಲೂಕು ಅಧ್ಯಕ್ಷ ಟಿ.ಕಿರಣಶಂಕರ್ ತಿಳಿಸಿದರು. ಅವರು, ಸೋಮವಾರ ಸಾರ್ವಜನಿಕ ಆಸ್ಪತ್ರೆಯಲ್ಲಿ ವೀರಶೈವ ಸಂಘಟನೆ, ಮಹಾಸಭಾವತಿಯಿಂದ ರೋಗಿಗಳಿಗೆ ಬ್ರೆಡ್, ಹಣ್ಣು ವಿತರಿಸಿ ಮಾತನಾಡಿದರು. ವೀರಶೈವ ಮಹಾಸಭಾ ಕಳೆದ ಹಲವಾರು ವರ್ಷಗಳಿಂದ ಅನೇಕ ಸಾಮಾಜಿಕ ಕಳಕಳಿಯುಳ್ಳ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬಂದಿದೆ. ವಿಶೇಷವಾಗಿ ಏ.29, 30 ಎರಡು ದಿನಗಳ ಕಾಲ ವೀರಶೈವ ಕಲ್ಯಾಣಮಂಟಪದಲ್ಲಿ ನಡೆಯುವ ಬಸವ ಜಯಂತಿ ಕಾರ್ಯಕ್ರಮದಲ್ಲಿ ಸ್ವಾಮೀಜಿಯವರೂ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿ ಸಮಾಜಕ್ಕೆ ಮಾರ್ಗದರ್ಶನ ನೀಡಲಿದ್ದಾರೆ ಎಂದರು. ಕರ್ತವ್ಯ ನಿರತ ವೈದ್ಯ ಡಾ.ಕೆ.ಆರ್.ನಾಗರಾಜು ಮಾತನಾಡಿ, ವೀರಶೈವ ಜಯಂತಿ ಸೇರಿದಂತೆ ಹಲವಾರು ಕಾರ್ಯಕ್ರಮಗಳಲ್ಲಿ ಸಂಘ,ಸಂಸ್ಥೆಗಳು ಹಾಗೂ ಸಾರ್ವಜನಿಕರು ಆಸ್ಪತ್ರೆ ರೋಗಿಗಳಿಗೆ ಹಣ್ಣು, ಬ್ರೆಡ್ ನೀಡುವ ಮೂಲಕ ರೋಗಿಗಳಿಗೆ ಆತ್ಮವಿಶ್ವಾಸ ತುಂಬುವ ಕೆಲಸ ಮಾಡುತ್ತಿದ್ಧಾರೆಂದರು. ಶುಶ್ರೂಷಕಿಯರಾದ ರಾಧ, ಸರಸ್ವತಿ, ಮಹಾಸಭಾದ ಪ್ರಧಾನ ಕಾರ್ಯದರ್ಶಿ ವಿ.ಮಂಜುನಾಥ, ಕೋಶ್ಯಾಧ್ಯಕ್ಷ ಎನ್.ರವಿಕುಮಾರ್, ಮಹಿಳಾ ಉಪಾಧ್ಯಕ್ಷೆ ಬಿ.ಎಂ.ಭಾಗ್ಯಮ್ಮ, ಮುರುಗೇಶ್, ಕಾರ್ಯದರ್ಶಿ ಶಿವಸ್ವಾಮಿ, ಪದಾಧಿಕಾರಿಗಳಾದ ಎಸ್.ಬಸವರಾಜು, ಜಿ.ಟಿ.ತಿಪ್ಪೇಸ್ವಾಮಿ, ಮುಂತಾದವರು ಉಪಸ್ಥಿತರಿದ್ದರು.

### ಜೋಗ ವೀಕ್ಷಣೆಗೆ ಪ್ರವೇಶ ಆರಂಭ

» **ಶಿವಮೊಗ್ಗ**

ಜಿಲ್ಲೆಯ ಸಾಗರ ತಾಲೂಕಿನ ವಿಶ್ವ ವಿಖ್ಯಾತ ಜೋಗ ಜಲಪಾತದ ಪ್ರವೇಶ ದ್ವಾರದ ಅಭಿವೃದ್ಧಿ ಕಾಮಗಾರಿ ನಡೆಯುತ್ತಿದ್ದ ಕಾರಣ ಏ.30ರವರೆಗೆ ಪ್ರವಾಸಿಗರ ಹಾಗೂ ಸಾರ್ವಜನಿಕರ ಪ್ರವೇಶವನ್ನು ತಾತ್ಕಾಲಿಕವಾಗಿ ನಿರ್ಬಂಧಿಸಲಾಗಿತ್ತು. ಮೇ 01 ರಿಂದ ಸಾರ್ವಜನಿಕರ ಹಾಗೂ ಪ್ರವಾಸಿಗರಿಗೆ ಜೋಗ ಜಲಪಾತದ ವೀಕ್ಷಣೆಗೆ ಪ್ರವೇಶಾವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜೋಗ ನಿರ್ವಹಣಾ ಪ್ರಾಧಿಕಾರಿದ ಮುಖ್ಯ ಕಾರ್ಯ ನಿರ್ವಹಣಾದಿಕಾರಿಗಳುತಿಳಿಸಿರುತ್ತಾರೆ.



# ಹೋರಾಡಬೇಕಿರುವುದು ಬದುಕಲೇ ಹೊರತು ಸಾಯಲು ಅಲ್ಲ





ಜಗತ್ತಿನ ಎಲ್ಲಾ ಜೀವರಾಶಿಗಳ ಪ್ರತಿ ಕ್ಷಣದ ಪ್ರಯತ್ನವೇ ಅದು.....

ಆದರೆ ಹೆಚ್ಚಾಗಿ ಇತ್ತೀಚಿನ ಆಧುನಿಕ ಕಾಲದಲ್ಲಿ ಮನುಷ್ಯ ಪ್ರಾಣಿ ಸಾಯಲೇ ಯೋಚಿಸುವುದು ಕಂಡುಬರುತ್ತದೆ......

ಕಷ್ಟ ಸಹಿಷ್ಣುತೆ ಕಡಿಮೆಯಾಗುತ್ತಿದೆ. ನಿನ್ನೆ ಮಾಧ್ಯಮಗಳಲ್ಲಿ ಸರ್ಕಾರಿ ಅಧಿಕಾರಿಯೊಬ್ಬರು ಆತ್ಮಹತ್ಯೆ ಮಾಡಿಕೊಂಡ ಘಟನೆ ಸಂದರ್ಭದಲ್ಲಿ.......

ಆತ್ಮಹತ್ಯೆ ಎಂಬ ಸಾವುಗಳು......

ನೇರವಾಗಿ ಹೇಳಬೇಕೆಂದರೆ

ಇದು ಒಂದು ಮಾನಸಿಕ ಖಾಯಿಲೆ. ದುರ್ಬಲ ಮನಸ್ಥಿತಿಯ ಸಂಕೇತ.

ಯಾವ ಕಾರಣಕ್ಕೂ ಆತ್ಮಹತ್ಯೆ ಮಾಡಿಕೊಂಡ ವ್ಯಕ್ತಿಗಳ ಬಗ್ಗೆ ಅತಿರೇಕದ ಸಹಾನುಭೂತಿ, ದಕ್ಷ, ಪ್ರಾಮಾಣಿಕ, ಒಳ್ಳೆಯವರು ಎಂಬ ಭಾವನೆ ಉಂಟು ಮಾಡಬಾರದು......

ಏಕೆಂದರೆ, ಆತ್ಮಹತ್ಯೆ ತಡೆಯಲು ಇಂದು ಅತ್ಯಂತ ಕಠಿಣ ನಿರ್ಧಾರಗಳು ಜನಸಾಮಾನ್ಯರಲ್ಲಿ ಮೂಡಬೇಕಿದೆ.ಯುವಪ್ರೇಮಿಗಳಾಗಲಿ,ರೈತರಾಗಲಿ, ಗೃಹಿಣಿಯರಾಗಲಿ, ಅಧಿಕಾರಿಗಳಾಗಲಿ, ಸಿನಿಮಾ ನಟರಾಗಲಿ ಎಲ್ಲರಿಗೂ ಇದು ಸಮಾನಾಗಿಯೇ ಅನ್ವಯ....

ಯಾವುದೋ ಬಾಹ್ಯ ಒತ್ತಡ ಇವರಿಗೆ ನೆಪ ಅಷ್ಟೇ. ಪರೀಕ್ಷೆಯಲ್ಲಿ ಪಾಸಾಗದ ವಿದ್ಯಾರ್ಥಿ, ಪ್ರೀತಿ ವೈಫಲ್ಯದ ಪ್ರೇಮಿಗಳು, ಕೌಟುಂಬಿಕ ಸಮಸ್ಯೆಯ ಗೃಹಿಣಿ, ಸಾಲಭಾದೆಯ ರೈತ, ರಾಜಕೀಯವೋ, ಇನ್ನಾವುದೋ ಒತ್ತಡದ ಅಧಿಕಾರಿ ಇವರೆಲ್ಲಾ ತಮ್ಮ ಪ್ರಾಣ ತಾವೇ ಕೊಂದು ಕೊಂಡರೆ ಇವರು ಬದುಕಿದ್ದು ತಾನೇ ಪ್ರಯೋಜನವೇನು. ಬದುಕಿರುವವರೆಲ್ಲಾ ಇವರಿಗಿಂತ ಆರಾಮವಾಗಿ ಇದ್ದಾರೆಯೇ.

ಯೋಚಿಸಿ ನೋಡಿ.....

ಹಗಲು ರಾತ್ರಿಯ ವ್ಯತ್ಯಾಸವಿಲ್ಲದೆ, ಹಿರಿಯ ಅಧಿಕಾರಿಗಳ ಸಹಾನುಭೂತಿಯೂ ಇಲ್ಲದೆ, ಚಳಿಗಾಳಿಮಳೆಯನ್ನೂಲೆಕ್ಕಿಸದೆತಮ್ಮಮನೆಯವರನ್ನು ತಿಂಗಳು ಗಟ್ಟಲೆ ಬಿಟ್ಟು ದೇಶಕಾಯುವ ಸೈನಿಕರು ಅದೆಷ್ಟು ಮಾನಸಿಕ ಹಿಂಸೆ ಅನುಭವಿಸುತ್ತಿಲ್ಲ.....

ಅನೇಕ ರೋಗಗಳ ಗೂಡಾದ ಮನುಷ್ಯನ ದೇಹವನ್ನು ನೋಡಲೂ ಅಸಹ್ಯವಾದ ಸ್ಥಿತಿಯಲ್ಲಿ ಅವರ ಆರೈಕೆ ಮಾಡುತ್ತಿರುವ ಡಾಕ್ಟರುಗಳು, ನರಸಮ್ಮಗಳು ಅದೆಂಥ ಮಾನಸಿಕ ಒತ್ತಡ ಅನುಭವಿಸುತ್ತಿರಬೇಕು,.....

ನಮ್ಮದೇ ಊಟದ ಇನ್ನೊಂದು ರೂಪವನ್ನು ನಮಗೇ ನೋಡಲು ಅಸಹ್ಯವಾಗಿರುವಾಗ ಇನ್ನೊಬ್ಬರ ಮಲ ಮೂತ್ರಗಳನ್ನು ಸ್ವಚ್ಚ ಮಾಡುವ ಆ ಕೆಲಸಗಾರರು ಹೇಗಿರಬೇಕು......

ಗಣಿಗಳಲ್ಲಿ, ಸುಡು ಬಿಸಿಲಿನಲ್ಲಿ, ಕೊರೆಯುವ ಚಳಿಯಲ್ಲಿ, ಊಟ ನೀರಿಲ್ಲದೆ ಕೆಲಸ ಮಾಡುವ ಕಾರ್ಮಿಕರು ಎಷ್ಟೊಂದು ಹಿಂಸೆ ಅನುಭವಿಸುತ್ತಿರಬೇಕು,.....

ನಮ್ಮ ದೇಶದ ಅನೇಕ ಮೌಢ್ಯದ, ಧಾರ್ಮಿಕ ಸೋಗಲಾಡಿತನದ ಕಟ್ಟುಪಾಡುಗಳ ನಡುವೆಯೂ ನಗುನಗುತ್ತಾ ತಮ್ಮ ಕೌಟುಂಬಿಕ ಕರ್ತವ್ಯ ನಿರ್ವಹಿಸುತ್ತಿರುವ ಹೆಣ್ಣುಮಕ್ಕಳು ಪಡುತ್ತಿರುವ ಮಾನಸಿಕ ಹಿಂಸೆ ಎಷ್ಟೊಂದು ಗೊತ್ತೆ......

ಭಯೋತ್ಪಾದಕ ದಾಳಿಗೆ ಸಿಲುಕಿ, ಪ್ರಕೃತಿ ವಿಕೋಪಗಳಿಗೆ ಸಿಲುಕಿ. ಎಲ್ಲವನ್ನೂ ಕಳೆದುಕೊಂಡು ದಿಢೀರನೇ ಭಿಕ್ಷುಕರಂತಾದ ಸಾವಿರಾರು ಜನರಿಗೆ ಆಗಿರಬಹುದಾದ ಮಾನಸಿಕ ಹಿಂಸೆ ಇನ್ನೆಷ್ಟಿರಬಹುದು ಊಹಿಸಿ......

ಹೀಗೆ ಅನೇಕ ಉದಾಹರಣೆಗಳು ಇವೆ. ಇವರೆಲ್ಲ ಆತ್ಮಹತ್ಯೆ ಮಾಡಿಕೊಂಡರೆ ? ಬದುಕುತ್ತಿಲ್ಲವೇ.....

ನಾವೇನೂ ಆದರ್ಶ ಕಲ್ಯಾಣ ರಾಜ್ಯದಲ್ಲಿದ್ದೇವೆಯೇ. ವಾಸಿಸುತ್ತಿರುವುದೇ ಕಪಟ, ವಂಚಕ ಭ್ರಮಾಲೋಕದ ಸಮಾಜದಲ್ಲಿ. ಹೀಗಿರುವಾಗ ಮಾನಸಿಕವಾಗಿ ದುರ್ಬಲ ಗೊಂಡು ಆತ್ಮಹತ್ಯೆ ಮಾಡಿಕೊಂಡರೆ ಅವರನ್ನು ನಂಬಿದ ಪ್ರೀತಿಸಿದ ಜನರ ಗತಿಯೇನು.....

ಸತ್ತವರಿಗೆ ಅದೇ ಕೊನೆ. ಆದರೆ ಅವರ ಅವಲಂಬಿತರಿಗೆ ನಿಜವಾದ ಕಷ್ಟ ಬದುಕಿನ ಆರಂಭ ಈ ಸಾವು ಎಂಬ ಪ್ರಜ್ಞೆ ಆತ್ಮಹತ್ಯೆ ಮಾಡಿಕೊಂಡವರಿಗೆ ಇರಬೇಡವೇ......

ಕಷ್ಟ, ನೋವು, ಯಾತನೆ ಪಡಬೇಕಿರುವುದು ಬದುಕಲೇ ಹೊರತು ಸಾಯಲು ಅಲ್ಲ. ಸಾವು ಸಹಜವಾಗೇ ಬರುತ್ತದೆ. ನಾವೇನು ಅದರ ಬಳಿ ಹೋಗಬೇಕಾಗಿಲ್ಲ......

ನಮ್ಮ ಸಮಾಜದ ನೈತಿಕ ಮೌಲ್ಯಗಳು, ಭ್ರಮೆಗಳು ಇದಕ್ಕೆ ಮತ್ತಷ್ಟು ಪೂರಕವಾಗಿದೆ. ಸಾಮಾಜಿಕ ಜಾಲತಾಣಗಳಲ್ಲಿ ಹೆಣ್ಣಿನ ಬೆತ್ತಲೆ ಚಿತ್ರ ಪ್ರಕಟವಾದರೆ ಆಕೆ ಏಕೆ ಆತ್ಮಹತ್ಯೆ ಮಾಡಿಕೊಳ್ಳಬೇಕು. ಬೆತ್ತಲೆಯೇ ಸಹಜತೆ ಅಲ್ಲವೇ. ನಮ್ಮೆಲ್ಲರ ಬಟ್ಟೆಗಳ ಹಿಂದೆ ಅಡಗಿರುವುದು ಬೆತ್ತಲೆಯೇ ಅಲ್ಲವೇ. ನಾವು ಹುಟ್ಟುವುದೇ ತಾಯಿಯ ಯೋನಿಯಿಂದ. ಅದರಲ್ಲಿ ಅವಮಾನ ಎಂಥದ್ದು......

ಅತ್ಯಾಚಾರಕ್ಕೆ ಒಳಗಾದ ಹೆಣ್ಣಿನ ಮುಖ ಸಾರ್ವಜನಿಕರಿಗೆ ತೋರಿಸುವುದಿಲ್ಲ ಏಕೆ. ವಿಕೃತ ಮನಸ್ಸಿನ ನಮ್ಮಗಳ ಮನಸ್ಥಿತಿಯಿಂದ ಅಲ್ಲವೇ. ಸಾಯುವುದೇ ಆದರೆ ಅತ್ಯಾಚಾರಿ ಸಾಯಬೇಕು ಬಲವಂತಕ್ಕೆ ಒಳಗಾದ ನತದೃಷ್ಟೆಯಲ್ಲ.......

ಹಾಗಾಗಿ ಆತ್ಮಹತ್ಯೆ ಹೇಡಿಗಳ ಕೃತ್ಯ. ಅದನ್ನು ಯಾವ ದೃಷ್ಟಿಕೋನದಿಂದಲೂ ಸಮರ್ಥಿಸಬಾರದು. ಅದು ಆತನ/ಆಕೆಯ ಸ್ವಾತಂತ್ರ್ಯ. ಆದರೆ ಸಮಾಜ ಸಹಾನುಭೂತಿ ಮಾತ್ರ ತೋರಬಾರದು.....

ನಾನು ಹೇಳುತ್ತಿರುವುದು ನಿಜ ಆತ್ಮಹತ್ಯೆಗಳ ಬಗ್ಗೆ. ಕೊಲೆ, ಆತ್ಮಹತ್ಯೆ ಎಂದು ಬಿಂಬಿಸುವ ಪಿತೂರಿ ಘಟನೆಗಳಿಗೆ ಇದು ಅನ್ವಯಿಸುವುದಿಲ್ಲ .....

ಸಾಯಲು ಒಂದೇ ದಾರಿ. ಉಸಿರು ನಿಲ್ಲುವಂತೆ ಮಾಡಿಕೊಳ್ಳುವುದು.

ಆದರೆ, ಬದುಕಲು ಹಲವಾರು ದಾರಿಗಳಿವೆ. ಅದನ್ನು ಅರಿಯದವರು ಇದ್ದರೂ ಅಷ್ಟೆ, ಹೋದರೂ ಅಷ್ಟೆ. ಎಂದಿದ್ದರೂ ಅಪಾಯಕಾರಿಯೇ.

ಕ್ಷಮಿಸಿ,

ನನ್ನ ಭಾವನೆ, ಅಭಿಪ್ರಾಯ ಕಠಿಣವಾಗಿರಬಹುದು. ಎಲ್ಲರ ಜೀವವೂ ಮುಖ್ಯ. ಆದರೆ ಆತ್ಮಹತ್ಯೆ ಮಾಡಿಕೊಂಡ ವ್ಯಕ್ತಿ ಕೊಲೆಗಾರನಂತೆ ಇತರರಿಗೆ ಪರೋಕ್ಷವಾಗಿ ಹಿಂಸೆ ನೀಡುತ್ತಾರೆ.....

ಒತ್ತಡದಿಂದಲೋ, ಸೇಡಿನ ಮನೋಭಾವದಿಂದಲೋ, ಭ್ರಮೆಯಿಂದಲೋ ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡು ಬದುಕಿರುವವರಿಗೆ ಸತ್ಯ ಹುಡುಕಲು ಅತ್ಯಂತ ಕಷ್ಟವನ್ನು ಸೃಷ್ಟಿಸುತ್ತಾರೆ......

ಆತ್ಮಹತ್ಯೆ ಮಾಡಿಕೊಂಡ ತಕ್ಷಣ ಅವರೆಲ್ಲಾ ತುಂಬಾ ಒಳ್ಳೆಯವರು ಮತ್ತು ಅಪಾರ ಸಂಕಟವನ್ನು ಅನುಭವಿಸಿದವರು ಎಂಬ ತೀರ್ಮಾನ ಬೇಡ. ಅದಕ್ಕಿಂತ ಕಷ್ಟಪಡುವವರು ಇನ್ನೂ ಜೀವಂತವಾಗಿ ಇದ್ದಾರೆ. ಸತ್ತವರು ದುರ್ಬಲರಷ್ಟೆ.....

ಎಂದಿಗೂ, ಎಂತಹ ವಿಷಮ ಸ್ಥಿತಿಯಲ್ಲಿಯೂ ಆತ್ಮಹತ್ಯೆ ಬೇಡ. ಉಸಿರು ಸ್ವಯಂ ನಿಲ್ಲುವವರೆಗೂ ಹೋರಾಡೋಣ.......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

### ಒಳಮೀಸಲಾತಿ ಜನಗಣತಿಯಲ್ಲಿ ಸಮುದಾಯಕ್ಕೆ ಅನ್ಯಾಯ

» **ಚಳ್ಳಕೆರೆ**

ರಾಜ್ಯದಲ್ಲಿ ಸರ್ಕಾರ ಇತ್ತೀಚೆಗೆ ನಡೆಸಿದ ಜನಗಣತಿಯಲ್ಲಿ ಮಾದಿಗ ಸಮುದಾಯವೂ ಸಹ ಅಸಮದಾನ ವ್ಯಕ್ತಪಡಿಸಿದೆ. ಕರ್ನಾಟಕದಲ್ಲಿ ಸುಮಾರು 60ಲಕ್ಷಕ್ಕೂ ಹೆಚ್ಚು ಮಾದಿಗ ಸಮುದಾಯವಿದೆ. ಮತ್ತೊಮ್ಮೆ ಒಳಮೀಸಲಾತಿಗಾಗಿ ಜನಗಣತಿ ನಡೆಯಲಿದ್ದು ಮಾದಿಗ ಸಮಾಜದ ಎಲ್ಲಾ ಬಂಧುಗಳು ಜನಗಣತಿಯಲ್ಲಿ ಮಾದಿಗ ಎಂದು ಬರೆಸಬೇಕಿದೆ ಎಂದು ಸಂಸದ ಗೋವಿಂದ ಎಂ.ಕಾರಜೋಳ ತಿಳಿಸಿದರು.

ಅಭಿಷೇಕ ನಗರದಲ್ಲಿ ದಲಿತ ಸಂಘಟನೆಗಳು ಹಮ್ಮಿಕೊಂಡಿದ್ದ ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಡಾ.ಬಾಬುಜಗಜೀವನರಾಮ್ ಜನ್ಮದಿನೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ನಾನು ಸಹ ಮಾದಿಗ ಸಮುದಾಯದ ಪರವಾಗಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿಯವರಿಗೆ ಒಳಮೀಸಲಾತಿ ಜಾರಿಮಾಡಬೇಕೆಂದು ಒತ್ತಾಯಿಸಲಾಗುವುದು ಎಂದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಮಾತನಾಡಿ, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಜನಮಾನಸದ ನಾಯಕರಾಗಿದ್ದಾರೆ. ಒಳಮೀಸಲಾತಿ ಜಾರಿಕುರಿತಂತೆ ಸಂಸದ ಗೋವಿಂದಕಾರಜೋಳ ಸರ್ಕಾರವನ್ನು ಒತ್ತಾಯಿಸುವಂತೆ ವಿನಂತಿಸಿದ್ದಾರೆ. ನಾನು ಸಹ ಅವರ ಮಾತಿಗೆ ಧ್ವನಿಗೂಡಿಸುತ್ತೇನೆ. ಮಾದಿಗ ಸಮುದಾಯಕ್ಕೆ ಒಳಮೀಸಲಾತಿ ಜಾರಿಗೆ ತರುವ ನಿಟ್ಟಿನಲ್ಲಿ ಸರ್ಕಾರಕ್ಕೆ ಸಂಪೂರ್ಣ ಸಹಕಾರ ನೀಡುವೆ ಎಂದರು.

ನಗರಸಭೆ ಅಧ್ಯಕ್ಷ ಆರ್.ಮಂಜುಳಾ, ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ್, ಉಪಾಧ್ಯಕ್ಷೆ ಸುಮ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಯ್ಯ, ಡಿಎಸ್‌ಎಸ್ ಸಂಘಟನೆಯ ನೇತಾರರಾದ ಟಿ.ವಿಜಯಕುಮಾರ್, ಹೊನ್ನೂರುಸ್ವಾಮಿ, ಭೀಮನಕೆರೆಶಿವಮೂರ್ತಿ, ಪ್ರಕಾಶ್, ಕೊಟ್ರೇಶ್, ಚಂದ್ರು, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಯುವಮುಖಂಡ ಕೆ.ಟಿ.ಕುಮಾರಸ್ವಾಮಿ, ಎಸ್ಸಿ ಮೋರ್ಚಾ ಜಿಲ್ಲಾಧ್ಯಕ್ಷ ಶಿವಣ್ಣ, ಚನ್ನಗಾನಹಳ್ಳಿಮಲ್ಲೇಶ್ ಮುಂತಾದವರು ಉಪಸ್ಥಿತರಿದ್ದರು.

### ಬಸವಣ್ಣನವರ ವಿಚಾರಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಳ್ಳಿ



**ಹೊಳಲ್ಕೆರೆ:** ಸಮಾನತೆಯ ಸಂದೇಶವನ್ನು ವಿಶ್ವಕ್ಕೆ ಸಾರಿದ ಹನ್ನೆರಡನೆ ಶತಮಾನದ ಬಸವಣ್ಣನವರ ಆಚಾರ–ವಿಚಾರಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಶಾಸಕ ಡಾ.ಎಂ.ಚಂದ್ರಪ್ಪ ಕರೆ ನೀಡಿದರು. ಬಸವ ಜಯಂತಿ ಪ್ರಯುಕ್ತ ತಾಲ್ಲೂಕು ಕಚೇರಿಯಲ್ಲಿ ಸೋಮವಾರ ಕರೆಯಲಾಗಿದ್ದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಪ್ರತಿ ವರ್ಷವೂ ಸಂಪ್ರದಾಯದಂತೆ ತಾಲ್ಲೂಕು ಕಚೇರಿಯಲ್ಲಿ ಸಮಾಜದ ಮುಖಂಡರು ಹಾಗೂ ಅಧಿಕಾರಿಗಳೊಂದಿಗೆ ಬಸವ ಜಯಂತಿಯನ್ನು ಆಚರಿಸಿಕೊಂಡು ಬರಲಾಗುತ್ತಿದೆ. ನೀವುಗಳು ವಿಜೃಂಭಣೆಯಿಂದ ಆಚರಿಸುವುದಾದರೆ ಸಂಪೂರ್ಣ ಸಹಕಾರ ನೀಡುತ್ತೇನೆ. ಸಮಾಜದ ಅಂಕು–ಡೊಂಕುಗಳನ್ನು ತಿದ್ದಿ, ಕಾಯಕಕ್ಕೆ ಒತ್ತು ನೀಡಿದ ಬಸವಣ್ಣನಂತವರು ಮತ್ತೆ ಹುಟ್ಟಿ ಬರಬೇಕು. ಅನುಭವ ಮಂಟಪದಲ್ಲಿ ಮಹಿಳೆಯರಿಗೂ ಸಮಾನತೆಯನ್ನು ಕೊಟ್ಟ ಬಸವಣ್ಣನವರ ಮಾರ್ಗದರ್ಶನದಂತೆ ಎಲ್ಲರೂ ನಡೆಯಬೇಕೆಂದು ಹೇಳಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T